ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 91 RNI Number : KNKAN/25/A2770 10-04-2026 Friday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :91 ರಾಯಚೂರು 10-04-2026 ಶುಕ್ರವಾರ ಪುಟ 04 ಬೆಲೆ ರೂ.2/- ಮೊ:8660146563

ಬಿಪಿಎಲ್ ಅನರ್ಹರ ಕಾರ್ಡ್ ತೆಗೆದು ಅವರಿಗೆ ಎಪಿಎಲ್ ಕಾರ್ಡ್

ಬೆಂಗಳೂರು,ಏ.09-

ಸುಮಾರು 14 ಲಕ್ಷ ಮಂದಿ ಎಪಿಎಲ್‌ನವರು ಬಿಪಿಎಲ್ ಕಾರ್ಡ್ ಹೊಂದಿದ್ದಾರೆ. ಅದನ್ನು ನಾವು ಬಿಪಿಎಲ್‌ಗೆ ತೊಂದರೆ ಆಗದಂತೆ ಪರಿಷ್ಕರಣೆ ಮಾಡಿ ತೆಗೆಯಬೇಕಿದ್ದು, ಹಂತಹಂತವಾಗಿ ತೆಗೆಯಲಿದ್ದೇವೆ ಎಂದು ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ ತಿಳಿಸಿದರು.

ನಗರದಲ್ಲಿಂದು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ರಾಜ್ಯದಲ್ಲಿ ನಾಲ್ಕು ಲಕ್ಷಕ್ಕೂ ಹೆಚ್ಚು ಅನಧಿಕೃತ ಬಿಪಿಎಲ್ ಕಾರ್ಡ್‌ಗಳಿವೆ ಎಂಬ ವರದಿ ಕೊಟ್ಟ ವಿಚಾರವಾಗಿ ಪ್ರತಿಕ್ರಿಯಿಸಿದರು.

ಗೈಡ್‌ಲೈನ್ಸ್ ಮೀರಿ ಎಪಿಎಲ್‌ನವರು 7 ಲಕ್ಷ ಕಾರ್ಡ್ ಬಿಪಿಎಲ್ ಕಾರ್ಡ್ ಮಾಡಿಸಿಕೊಂಡಿದ್ದಾರೆ ಅಂತ ವರದಿ ಇದೆ. ಅದನ್ನು ಪರಿಷ್ಕರಿಸುತ್ತಿದ್ದೇವೆ. ಸುಮಾರು 14 ಲಕ್ಷ ಮಂದಿ ಎಪಿಎಲ್‌ನಲ್ಲಿ ಇರಬೇಕಾದವರು ಕಾರ್ಡ್ ಹೊಂದಿದ್ದಾರೆ. ಹಂತ ಹಂತವಾಗಿ ಅದನ್ನು ತೆಗೆಯುತ್ತೇವೆ ಎಂದರು.

ನಿಜವಾಗಲೂ ಬಿಪಿಎಲ್ ಕಾರ್ಡ್‌ಗೆ ಯಾರು ಅರ್ಹರಿದ್ದಾರೋ ಅವರ ಹೆಸರು ಡಿಲೀಟ್ ಆಗಲ್ಲ. ಡಿಲೀಟ್ ಆಗಿದ್ದರೆ, ತಹಶೀಲ್ದಾರ್‌ಗೆ ಅರ್ಜಿ ಹಾಕಬೇಕಿದ್ದು, ಮತ್ತೆ ಬಿಪಿಎಲ್ ಕಾರ್ಡ್ ಕೊಡುತ್ತೇವೆ. ಎಪಿಎಲ್ ಕಾರ್ಡ್ ಇರುವವರಿಗೆ ಸದ್ಯಕ್ಕೆ ನಾವೇನೂ ಮಾಡ್ತಾ ಇಲ್ಲ. ಬಿಪಿಎಲ್‌ನಲ್ಲಿ ಸಾಕಷ್ಟು ಜನ ಎಪಿಎಲ್‌ನವರು ಇದ್ದಾರೆ. ಬಿಪಿಎಲ್ ಕಾರ್ಡ್ ಮಿಸ್ ಆಗಿದ್ರೆ ಅಂಥವರಿಗೆ ಕೊಡುತ್ತಿದ್ದೇವೆ. ಗೆ ಯಾರೂ ಅರ್ಹರಲ್ಲವೋ ಅವರು ಎಪಿಎಲ್‌ಗೆ ಹೋಗ್ತಾರೆ ಎಂದು ಸ್ಪಷ್ಟಪಡಿಸಿದರು.

ಎಲ್‌ಪಿಜಿ ಸಮಸ್ಯೆ ಕುರಿತು ನಾಳೆ ಸಭೆ: ರಾಜ್ಯದಲ್ಲಿ ಮುಂದುವರೆದ ಸಮಸ್ಯೆ ವಿಚಾರವಾಗಿ ಮಾತನಾಡಿ, ನಾಳೆ ಮೀಟಿಂಗ್ ಕರೆದಿದ್ದೇನೆ. ಅವರೆಲ್ಲ ವಿವರ ತಗೊಂಡು ಬರ್ತಾರೆ. ಆಟೋ ಓಡಿಸುವವರ ಜೀವನ ಗ್ಯಾಸ್ ಮೇಲೆ ಅವಲಂಬಿಸಿದೆ. ಅವರಿಗೆ ಅನಿವಾರ್ಯವಾಗಿ ಗ್ಯಾಸ್ ಕೊಡಬೇಕಾಗುತ್ತದೆ. ನಾನೂ ಕೂಡಾ ಒತ್ತಾಯ ಮಾಡಿದ್ದೇನೆ. ಕೇಂದ್ರ ಸರ್ಕಾರಕ್ಕೂ ಪತ್ರ ಬರೆದಿದ್ದೇನೆ. ಆದ್ಯತೆಯ ಆಧಾರದ ಮೇಲೆ ಗ್ಯಾಸ್ ಕೊಡಬೇಕು ಅಂತ ಮನವಿ ಮಾಡಿದ್ದೇವೆ. ಅದಕ್ಕೆ ಏನು ರಿಪ್ಲೈ ಬರುತ್ತೋ ಕಾದು ನೋಡಿ ಮಾತನಾಡುತ್ತೇನೆ ಎಂದರು.

ಬ್ಲ್ಯಾಕ್ ಮಾರ್ಕೆಟ್‌ನಲ್ಲಿ ಗ್ಯಾಸ್ ಸಿಲಿಂಡರ್ ಹೆಚ್ಚು ರೇಟ್‌ಗೆ ಮಾರಾಟ ಆಗುತ್ತಿರುವ ವಿಚಾರವಾಗಿ ಪ್ರತಿಕ್ರಿಯಿಸಿ, ಈ ಬಗ್ಗೆ ಗೃಹ ಸಚಿವರ ಜೊತೆ ಮಾತನಾಡುತ್ತೇನೆ. ಪೊಲೀಸ್ ಕಮಿಷನರ್‌ಗೆ ಹೇಳಿ ಬಂದೋಬಸ್ತ್ ಮಾಡೋಕೆ ಹೇಳುತ್ತೇನೆ. ನಮ್ಮ ಇಲಾಖೆಯವರು ರೇಡ್ ಮಾಡಬೇಕು. ಅದಕ್ಕಾಗಿ ಮೌಲ್ಯಮಾಪನ ಇಲಾಖೆ ಇದೆ. ನಾಳೆ ಅವರನ್ನು ಮೀಟಿಂಗ್‌ಗೆ ಕರೆದಿದ್ದೇನೆ. ಇಲಾಖೆ ಮುಖ್ಯಸ್ಥರನ್ನು ಕರೆದಿದ್ದೇನೆ. ಆಯಿಲ್ ಕಾರ್ಪೊರೇಷನ್ ಅವರನ್ನೂ ಕರೆದಿದ್ದೇನೆ. ಕುಳಿತು ಮಾತನಾಡಿ ಪರಿಹಾರ ಹುಡುಕಬೇಕು.



ಆಯಿಲ್ ಕಾರ್ಪೊರೇಷನ್ ಎಕ್ಸಿಕ್ಯೂಟಿವ್ ಡೈರೆಕ್ಟರ್ ಏನು ವರದಿ ತರುತ್ತಾರೋ ನೋಡಿ ನಿಮ್ಮ ಜೊತೆ ಮಾತನಾಡುತ್ತೇನೆ ಎಂದು ತಿಳಿಸಿದರು.

ಅಕ್ಕಪಕ್ಕದ ರಾಜ್ಯದಲ್ಲಿ ಇಷ್ಟು ಕೊರತೆ ಇಲ್ಲ: ಗ್ಯಾಸ್ ಸಮಸ್ಯೆಯಿಂದ ಸಾವಿರಾರು ಉದ್ಯಮಗಳು ಬೀದಿಗೆ ಬಂದಿವೆ. ಅಕ್ಕಪಕ್ಕದ ರಾಜ್ಯಗಳಲ್ಲಿ ಗ್ಯಾಸ್‌ಗೆ ಇಷ್ಟೊಂದು ಕೊರತೆ ಕಾಣುತ್ತಿಲ್ಲ. ನಮ್ಮಲ್ಲಿ ಕೊರತೆ ಇದೆ. ಮಲತಾಯಿ ಧೋರಣೆ ಆಗಿದೆ. ನಮ್ಮ ರಾಜ್ಯದಿಂದ ಆಯ್ಕೆಯಾದ ನಿರ್ಮಲಾ ಸೀತಾರಾಮನ್ ಅವರೇ ಹೀಗೆ ಮಾಡಿದ್ದಾರೆ. ಅವರು ರಾಜಕೀಯವಾಗಿ ತಾರತಮ್ಯ ಮಾಡ್ತಿದ್ದಾರೆ. ನಮ್ಮದು ಅಭಿವೃದ್ಧಿಯ ಪಥದಲ್ಲಿರುವ ರಾಜ್ಯ. ನಮ್ಮ ನಗರದಲ್ಲಿ ಹೊರ ರಾಜ್ಯದವರು ಹೆಚ್ಚಿದ್ದಾರೆ. ಅವರು ಹೊಟೇಲ್‌ಗಳನ್ನು ಅವಲಂಬಿಸಿದ್ದಾರೆ ಎಂದರು.

ಅವರ ಜೀವನ, ಊಟ, ವಸತಿ ಎಲ್ಲವೂ ಅವಲಂಬಿತವಾಗಿದೆ. ಅವರಿಗೆ ಸರಿಯಾಗಿ ಗ್ಯಾಸ್ ಕೊಡದಿದ್ದರೆ, ಅವರೆಲ್ಲಿ ಹೋಗಬೇಕು?. ಇದನ್ನು ಮುಖ್ಯವಾಗಿ ಪರಿಗಣಿಸಿ ನಮಗೆ ಗ್ಯಾಸ್ ಕೊಡಬೇಕಾಗಿತ್ತು. ಕೊಟ್ಟಿಲ್ಲ. ಅದಕ್ಕೆ ಇದನ್ನು ಮಲತಾಯಿ ಧೋರಣೆ ಅಂತ ಹೇಳುತ್ತೇನೆ. ನಮ್ಮ ಪೆಟ್ರೋಲಿಯಂ ಸಚಿವರಿಗೆ ಪತ್ರ ಬರೆದಿದ್ದೇನೆ ಎಂದು ತಿಳಿಸಿದರು.

ಆಟೋ ಚಾಲಕರು ಗ್ಯಾಸ್ ಸಿಗದಿದ್ದಕ್ಕೆ ರಾಜ್ಯ ಸರ್ಕಾರದ ಮೇಲೆ ಆಕ್ರೋಶಗೊಂಡ ವಿಚಾರವಾಗಿ, ಇದರಲ್ಲಿ ರಾಜ್ಯ ಸರ್ಕಾರದ್ದು ಏನೂ ಪಾತ್ರ ಇಲ್ಲ. ಪೆಟ್ರೋಲ್, ಡೀಸೆಲ್, ಗ್ಯಾಸ್ ಎಲ್ಲವೂ ಕೇಂದ್ರ ಸರ್ಕಾರಕ್ಕೆ ಸಂಬಂಧಪಟ್ಟದ್ದು. ಏನಾದರೂ ಅದಕ್ಕೆ ಅವರೇ ಹೊಣೆ. ನಮ್ಮ ಪಾತ್ರ ಏನೂ ಇಲ್ಲ. ನಾವು ಕಾಳಸಂತೆಗೆ ಹೋಗದಂತೆ, ಏಜೆನ್ಸಿ ಗಳು ಸರಿಯಾಗಿ ವಿತರಣೆ ಮಾಡದಿದ್ದರೆ, ಅಂತಹ ವಿಚಾರಗಳನ್ನು ನೋಡಬೇಕಾಗುತ್ತದೆ. ಗೃಹ ಸಚಿವರ ಜೊತೆ ಮಾತನಾಡಿ ಬಂದೋಬಸ್ತ್ ಮಾಡುತ್ತೇವೆ ಎಂದರು.



ಪೂರ್ವಭಾವಿ ಸಿದ್ಧತಾ ಸಭೆ

ಸಂಭ್ರಮದಿಂದ ಭಗೀರಥ ಜಯಂತಿ ಆಚರಣೆ; ಎಡಿಸಿ ಶಿವಾನಂದ

ರಾಯಚೂರು,ಏ. 09-

ಜಿಲ್ಲಾಡಳಿತದಿಂದ ಮಹರ್ಷಿ ಭಗೀರಥ ಜಯಂತಿಯನ್ನು ಏಪ್ರಿಲ್ 23ರಂದು ಸಂಭ್ರಮದಿಂದ ಆಚರಿಸಲಾಗುವುದು ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಶಿವಾನಂದ ಅವರು ತಿಳಿಸಿದರು.

ಏಪ್ರಿಲ್ 09ರ ಗುರುವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಭಗೀರಥ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.ಅಂದು ಬೆಳಿಗ್ಗೆ 9ಗಂಟೆಗೆ ನಗರದ ಶ್ರೀಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನದಲ್ಲಿ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುವುದು. ನಂತರ ಬೆಳಿಗ್ಗೆ 11ರಂಗಮಂದಿರ ದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ ಎಂದರು.

ಸರ್ಕಾರದ ಮಾರ್ಗಸೂಚಿಯನ್ವಯ ಜಯಂತಿ ಆಚರಣೆ ನಡೆಯಬೇಕು. ಶಿಷ್ಟಾಚಾರ ಅನುಸಾರ ಆಮಂತ್ರಣ ಪತ್ರಿಕೆ ಮುದ್ರಿಸಿ ವಿತರಿಸಬೇಕು. ಜಯಂತಿಗೆ ಆಗಮಿಸುವ ಜನತೆಗೆ ಕುಡಿಯುವ ನೀರು, ಉಪಹಾರ, ಆಸನದ ವ್ಯವಸ್ಥೆ ಮಾಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಭಗೀರಥ ಜಯಂತಿಯನ್ನು ಜಿಲ್ಲೆಯ ಎಲ್ಲ ಶಾಲಾ-ಕಾಲೇಜುಗಳು ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ಆಚರಣೆ ಮಾಡುವಂತೆ ಆದೇಶ ಹೊರಡಿಸಲು ಕ್ರಮ ವಹಿಸಬೇಕು ಎಂದು ಸಂಬಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಾರ್ಯಕ್ರಮದಲ್ಲಿ ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಅಪರ ಜಿಲ್ಲಾಧಿಕಾರಿಗಳು ಸಭೆಯ ಮೂಲಕ ಸಾರ್ವಜನಿಕರಲ್ಲಿ ಮನವಿ ಮಾಡಿದರು.ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಉತ್ತರಾದೇವಿ, ಸಮಾಜದ ಅಧ್ಯಕ್ಷರಾದ ಪಾಗುಂಟಪ್ಪ ಮಿರ್ಜಾಪೂರು, ದೇವೇಂದ್ರಪ್ಪ , ಎಂ. ಚಂದ್ರಶೇಖರ್, ಎಂ. ಚಂದ್ರಮೌಳಿ, ಬಿ.ಆರ್. ಪ್ರವೀಣ್‌ಕುಮಾರ್,ವೈ. ಯಂಕೋಬ,ವಿ.ವೆಂಕೋಬ, ಎಂ.ಈರಣ್ಣ, ಕೆ.ಆಂಜನೇಯ, ಬಿ. ನಾಗರಾಜ, ಶ್ರೀನಿವಾಸ ಇಂದಿರಾನಗರ, ಸುರೇಖ, ಅಮರೇಶ ಸಾಗರ,ಹಾಲ್ವಿ ಶ್ರೀನಿವಾಸ, ನರಸಿಂಹಲು ಜಂಬಲದಿನ್ನಿ, ಎ.ಅಮರೇಶಪ್ಪ, ರಾಮಪ್ಪ, ಎಂ. ಸುಭಾಶ್ಚಂದ್ರ, ವೆಂಕೋಬಾ ಸರ್ಜಾಪೂರು, ಪಾಂಡುರಂಗ ಕಾಡ್ಲೂರು, ಕೆ.ಶರಣಬಸವ, ಕೆ. ಚಿದಾನಂದ, ರಂಗನಾಥ, ವಿ.ನವೀನ್, ಜೆ.ವೀರೇಶ. ಜೆ.ಬಸವರಾಜ, ಆರ್.ಶ್ರೀನಿವಾಸ, ಎಂ.ವೆಂಕಟೇಶ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಸಭೆಯಲ್ಲಿ ಇದ್ದರು.

ನಗರ ಅಧ್ಯಕ್ಷರಾಗಿ ಶಬೀರ್ ಅಹ್ಮದ್ ಹೌದಡಿ ನೇಮಕ



ರಾಯಚೂರು,ಏ.9-

ಆಲ್ ಇಂಡಿಯಾ ಮಜ್ಲಿಸ್-ಎ- ಇತ್ತೆಹಾದ್- ಉಲ್-ಮುಸ್ಲಿಮೀನ್ ಪಕ್ಷದ ರಾಯಚೂರು ನಗರ ಘಟಕದ ಅಧ್ಯಕ್ಷರಾಗಿ ಶಬೀರ್ ಅಹ್ಮದ್ ಹೌದಡಿ ಅವರನ್ನು ನೇಮಕ ಮಾಡಲಾಗಿದೆ.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಶಬೀರ್ ಅಹ್ಮದ್ ಹೌದಡಿ, ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಹಾಗೂ ಹೈದರಾಬಾದ್ ಸಂಸದ ಅಸಾದುದ್ದೀನ್ ಓವೈಸಿ ಅವರು ನನ್ನನ್ನು ರಾಯಚೂರು ನಗರ ಅಧ್ಯಕ್ಷರನ್ನಾಗಿ ನೇಮಿಸಿದ್ದಾರೆ ಎಂದು ತಿಳಿಸಿದರು.


ಪಕ್ಷವು ದೇಶದ ಸಂವಿಧಾನದ ಮೌಲ್ಯಗಳನ್ನು ಎತ್ತಿಹಿಡಿಯುವ ಹಾಗೂ ಸಂವಿಧಾನ ಶಿಲ್ಪಿ ಡಾ.ಬಿ. ಆರ್.ಅಂಬೇಡ್ಕರ್ ಅವರ ಆದರ್ಶಗಳನ್ನು ಕಾಪಾಡುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದೆ. ಮುಂದಿನ ದಿನಗಳಲ್ಲಿ ರಾಯಚೂರು ನಗರದಲ್ಲಿ

3 ನೇ ಪುಟಕ್ಕೆ

ಏ.11, 12ಕ್ಕೆ ಬೀದರ್‌ನಲ್ಲಿ ಕಾರ್ಯನಿರತ ಪತ್ರಕರ್ತರ 40ನೇ ರಾಜ್ಯ ಸಮ್ಮೇಳನ: ಆರ್.ಗುರುನಾಥ

ರಾಯಚೂರು,ಏ.9-

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ 40ನೇ ರಾಜ್ಯ ಮಟ್ಟದ ಸಮ್ಮೇಳನ ಏಪ್ರಿಲ್ 11 ಮತ್ತು 12ರಂದು ಬೀದರ್‌ನಲ್ಲಿ ಎರಡು ದಿನಗಳ ಕಾಲ ಅದ್ದೂರಿಯಾಗಿ ನಡೆಯಲಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ಆರ್.ಗುರುನಾಥ ತಿಳಿಸಿದರು.



ನಗರದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತ ನಾಡಿದ ಅವರು, ಏ.11 ರಂದು ಬೀದರ್‌ನ ಝೀರಾ ಕನ್ವೆನ್ಷನ್ ಹಾಲ್‌ನಲ್ಲಿ ಸಮ್ಮೇಳನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಸರ್ಕಾರದ ಹಲವು ಸಚಿವರು ಭಾಗವಹಿಸಲಿದ್ದಾರೆ. ಸಚಿವ ಈಶ್ವರ ಖಂಡ್ರೆ ಸಮ್ಮೇಳನದ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಸಮ್ಮೇಳನದಲ್ಲಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಹಾಗೂ ಮಾಧ್ಯಮ, ಗಾಂಧಿ ಮತ್ತು ಅಂಬೇಡ್ಕರ್ ಎಐ ಮತ್ತು ಡಿಜಿಟಲ್ ಮಾಧ್ಯಮ ಸೇರಿದಂತೆ ನಾಲ್ಕು ವಿಷಯಗಳ ಕುರಿತು ಗೋಷ್ಠಿಗಳು ನಡೆಯಲಿವೆ. ಜೊತೆಗೆ ಹಲವು ಪ್ರಶಸ್ತಿ ಪ್ರದಾನವೂ ಜರುಗಲಿದೆ. ಪ್ರಸ್ತುತ ಪತ್ರಕರ್ತರು ಎದುರಿಸುತ್ತಿರುವ ಸವಾಲುಗಳ ಕುರಿತು ವಿಸ್ತೃತ ಚರ್ಚೆ ನಡೆಯಲಿದೆ ಎಂದು ಅವರು ಹೇಳಿದರು. ಜಿಲ್ಲೆಯ ಎಲ್ಲಾ

3 ನೇ ಪುಟಕ್ಕೆ

ಸಚಿವ ಶರಣಪ್ರಕಾಶ ಪಾಟೀಲ ಉಚ್ಚಾಟನೆಗೆ ಆಗ್ರಹ



ರಾಯಚೂರು,ಏ.9-

ಡಾ. ಬಾಬು ಜಗಜೀವನರಾವ್ ಅವರ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ ಅವರು ಆಗಮಿಸದೇ ದಲಿತರಿಗೆ ಅವಮಾನ ಮಾಡಿದ್ದಾರೆ ಎಂದು ಆರೋಪಿಸಿ ಮಾದಿಗ ದಂಡೋರ (ಪಾವಗಡ ಶ್ರೀರಾಮ್ ಬಣ) ಸಂಘಟನೆ ಜಿಲ್ಲಾಧಿಕಾರಿಗಳ ಮುಖಾಂತರ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದೆ.

ಸಂಘಟನೆಯ ಜಿಲ್ಲಾ ಅಧ್ಯಕ್ಷ ಬಿ. ನರಸಿಂಹಲು ಮೆರ್ಚಟಳ್ ಅವರ ನೇತೃತ್ವದಲ್ಲಿ ಸಲ್ಲಿಸಿದ ಮನವಿಯಲ್ಲಿ, ಏಪ್ರಿಲ್ 5ರಂದು ನಡೆದ ಡಾ. ಬಾಬು ಜಗಜೀವನರಾಮ್ ಅವರ ಜಯಂತಿ ಕಾರ್ಯಕ್ರಮಕ್ಕೆ ಸಚಿವರು ಮುಖ್ಯ ಅತಿಥಿಗಳಾಗಿ ಆಗಮಿಸಬೇಕಾಗಿದ್ದರೂ ಉದ್ದೇಶಪೂರ್ವಕವಾಗಿ ಹಾಜರಾಗಿಲ್ಲ ಎಂದು ಆರೋಪಿಸಲಾಗಿದೆ. ಇದರಿಂದ ಮಾದಿಗ ಸಮುದಾಯದ ಜನರ ಮನಸ್ಸಿಗೆ ನೋವಾಗಿದೆ ಎಂದು ತಿಳಿಸಲಾಗಿದೆ.

3 ನೇ ಪುಟಕ್ಕೆ



11ರಂದು ಮಾತೃ ವಂದನ ಬೃಹತ್ ಸಮಾವೇಶ

ರಾಯಚೂರು,ಏ.9-

ವಂದೇ ಮಾತರಂ ಗೀತೆಯ 150ನೇ ವಾರ್ಷಿಕೋತ್ಸವದ ಅಂಗವಾಗಿ ಮಾತೃ ವಂದನ ಹೆಸರಿನ ದೇಶಭಕ್ತಿ ಹಾಗೂ ಧರ್ಮ ಜಾಗೃತಿ ಬೃಹತ್ ಸಮಾವೇಶವನ್ನು ಏ.11ರಂದು ಆಯೋಜಿಸಲಾಗಿದೆ ಎಂದು ಶಿವಸೇನಾ (ಕರ್ನಾಟಕ) ಜಿಲ್ಲಾಧ್ಯಕ್ಷ ರಾಜಾಚಂದ್ರ ರಾಮನಗೌಡ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಂಕಿಮ್ ಚಂದ್ರ ಚಟರ್ಜಿ ಅವರು 1875ರಲ್ಲಿ ಆನಂದಮಠ ಕಾದಂಬರಿಯಲ್ಲಿ ರಚಿಸಿದ ವಂದೇ ಮಾತರಂ ಗೀತೆ ಭಾರತೀಯರಲ್ಲಿ ದೇಶಭಕ್ತಿ ಹಾಗೂ ಸ್ವಾತಂತ್ರ್ಯ ಹೋರಾಟದ ಸ್ಫೂರ್ತಿ ತುಂಬಿದ ಐತಿಹಾಸಿಕ ಗೀತೆಯಾಗಿದೆ. ಬ್ರಿಟಿಷರ ವಿರುದ್ಧ ಹೋರಾಟಕ್ಕೆ ಪ್ರೇರಣೆ ನೀಡಿದ ಈ ಗೀತೆಯ 150 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದರು.

ರಾಷ್ಟ್ರೀಯತೆ, ಸಂಸ್ಕೃತಿ ಹಾಗೂ ಸನಾತನ ಧರ್ಮದ ರಕ್ಷಣೆಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಶಿವಸೇನಾ (ಕರ್ನಾಟಕ) ರಾಯಚೂರು ಜಿಲ್ಲಾ ಘಟಕದಿಂದ ಸಮಾವೇಶ ಆಯೋಜಿಸಲಾಗಿದೆ ಎಂದು ಅವರು ಹೇಳಿದರು.

ಏ.11ರ ಸಂಜೆ 5ರಿಂದ

3 ನೇ ಪುಟಕ್ಕೆ

ಗುತ್ತಿಗೆ ಪದ್ಧತಿ ರದ್ದು, ಕನಿಷ್ಠ ವೇತನ ಹೆಚ್ಚಳಕ್ಕೆ ಒತ್ತಾಯಿಸಿ (ಎಐಸಿಸಿಟಿಯು) ರಸ್ತೆ ತಡೆ

ಸಿರವಾರ,ಏ.9-

ರಾಜ್ಯ ಹಾಗೂ ದೇಶದಾದ್ಯಂತ ಕಾರ್ಮಿಕರ ಬದುಕು ದಿನೇದಿನೇ ಸಂಕಷ್ಟಕ್ಕೀಡಾಗುತ್ತಿರುವ ಹಿನ್ನೆಲೆಯಲ್ಲಿ ಕನಿಷ್ಠ ವೇತನವನ್ನು ತಕ್ಷಣ ಪರಿಷ್ಕರಿಸಿ ತಿಂಗಳಿಗೆ ಕನಿಷ್ಠ ₹42,000 ನಿಗದಿ ಮಾಡಬೇಕು, ಗುತ್ತಿಗೆ ಪದ್ಧತಿಯನ್ನು ರದ್ದುಗೊಳಿಸಿ ಗುತ್ತಿಗೆ ಕಾರ್ಮಿಕರನ್ನು ಖಾಯಂಗೊಳಿಸಬೇಕು ಎಂದು ಆಗ್ರಹಿಸಿ ತುಂಗಭದ್ರಾ, ನೀರಾವರಿ ಕಾರ್ಮಿಕರ ಸಂಘ (ಎಐಸಿಸಿಟಿಯು) ಸಿರಿವಾರ ವಿಭಾಗದ ಸಮಿತಿ ವತಿಯಿಂದ ನಗರದ ಬಸ್ ನಿಲ್ದಾಣದ ಮುಂಭಾಗ ರಸ್ತೆ ತಡೆ ನಡೆಸಿ ಪ್ರತಿಭಟನೆ ಮಾಡಲಾಯಿತು.

ಈ ವೇಳೆ ತುಂಗಭದ್ರಾ, ನೀರಾವರಿ ಕಾರ್ಮಿಕ ಸಂಘದ ಕೇಂದ್ರ ಸಮಿತಿಯ ಅಧ್ಯಕ್ಷ ಕೆ. ನಾಗಲಿಂಗಸ್ವಾಮಿ ಅವರು ಮಾತನಾಡಿದರು, ಕೇಂದ್ರ ಸರ್ಕಾರವು 2025ರ ನವೆಂಬರ್ 21ರಿಂದ ಜಾರಿಗೆ ತಂದ ನಾಲ್ಕು ಕಾರ್ಮಿಕ ಸಂಹಿತೆಗಳು ದಶಕಗಳ ಹೋರಾಟದ ಮೂಲಕ ಕಾರ್ಮಿಕರು ಪಡೆದುಕೊಂಡ ಹಕ್ಕುಗಳನ್ನು ದುರ್ಬಲಗೊಳಿಸುತ್ತಿವೆ ಎಂದು ಆರೋಪಿಸಿದರು.



''ವ್ಯವಹಾರ ಸುಲಭತೆ'' ಎಂಬ ಹೆಸರಿನಲ್ಲಿ ಉದ್ಯೋಗದಾತರಿಗೆ ಹೆಚ್ಚಿನ ಅಧಿಕಾರ ನೀಡಿ ಕಾರ್ಮಿಕರ ಮೇಲೆ ಶೋಷಣೆಗೆ ಅವಕಾಶ ಕಲ್ಪಿಸಲಾಗುತ್ತಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

2026ರ ಫೆಬ್ರವರಿ 12ರಂದು ನಡೆದ ದೇಶವ್ಯಾಪಿ ಸಾಮಾನ್ಯ ಮುಷ್ಕರಕ್ಕೆ ಕಾರ್ಮಿಕರಿಂದ ಭಾರೀ ಬೆಂಬಲ ವ್ಯಕ್ತವಾಗಿದ್ದು, ಕಾರ್ಮಿಕ ವಿರೋಧಿ ನೀತಿಗಳಿಗೆ ತೀವ್ರ ವಿರೋಧ ವ್ಯಕ್ತವಾಗಿದೆ. ಕಾರ್ಮಿಕ ಸಂಹಿತೆಗಳು ವೇತನ, ಉದ್ಯೋಗ ಭದ್ರತೆ ಹಾಗೂ ಸಂಘಟನಾ ಹಕ್ಕುಗಳ ಮೇಲೆ

3 ನೇ ಪುಟಕ್ಕೆ

ಅನಧಿಕೃತ ಆರ್ ಓ ಘಟಕಗಳಿಗೆ ಪುರಸಭೆಯಿಂದ ನೋಟಿಸ್ : ದಾಖಲೆ ಸಲ್ಲಿಸದಿದ್ದರೆ ಮುಚ್ಚುವ ಎಚ್ಚರಿಕೆ



ಲಿಂಗಸುಗೂರು: ಏ.06:

ಪಟ್ಟಣದ ಪುರಸಭೆ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಕಾರ್ಯನಿರ್ವಹಿಸುತ್ತಿರುವ ಆರ್ ಓ ಪ್ಲಾಂಟ್ ನೀರು ಶುದ್ಧೀಕರಣ ಘಟಕಗಳ ವಿರುದ್ಧ ಪುರಸಭೆ ಆಡಳಿತ ಕ್ರಮ ಕೈಗೊಳ್ಳಲು ಮುಂದಾಗಿದೆ.

ವಾರ್ಡ್ ನಂ. 18ರ ಕೈಗಾರಿಕಾ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ ಎರಡು ನೀರು ಶುದ್ಧೀಕರಣ ಘಟಕಗಳು ಪುರಸಭೆಯ ಅಗತ್ಯ ಅನುಮತಿಗಳಿಲ್ಲದೆ ಕಾರ್ಯನಿರ್ವಹಿಸುತ್ತಿರುವುದು ಬೆಳಕಿಗೆ ಬಂದಿದೆ. ಈ ಕುರಿತು ಇತ್ತೀಚೆಗೆ ಪತ್ರಿಕೆಯಲ್ಲಿ ಪ್ರಕಟವಾದ ವರದಿಯನ್ನು ಆಧರಿಸಿ ಪುರಸಭೆ ಅಧಿಕಾರಿಗಳು ಪರಿಶೀಲನೆ ನಡೆಸಿದ್ದಾರೆ.

ದಿನಾಂಕ 02 ಏಪ್ರಿಲ್ ರಂದು ಪುರಸಭೆ ಮುಖ್ಯಾಧಿಕಾರಿಗಳು, ಕಿರಿಯ ಅಭಿಯಂತರರು ಮತ್ತು ಕಿರಿಯ ಆರೋಗ್ಯ ನಿರೀಕ್ಷಕರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದಾಗ, ಘಟಕಗಳಿಗೆ ಸಂಬಂಧಿಸಿದ ಮಾಲೀಕರು ಸ್ಥಳದಲ್ಲಿ ಲಭ್ಯವಿರಲಿಲ್ಲ. ಜೊತೆಗೆ, ಘಟಕಗಳಿಗೆ ಅಗತ್ಯವಾದ ಯಾವುದೇ ದಾಖಲೆಗಳು ಲಭ್ಯವಿಲ್ಲವೆಂದು ಅಧಿಕಾರಿಗಳಿಗೆ ತಿಳಿದು ಬಂದಿದೆ.

ಈ ಹಿನ್ನೆಲೆ, ಪುರಸಭೆ ವತಿಯಿಂದ ಸಂಬಂಧಿಸಿದ ಘಟಕಗಳಿಗೆ ನೋಟಿಸ್ ಜಾರಿಗೊಳಿಸಲಾಗಿದ್ದು, 03 ರಿಂದ 05 ದಿನಗಳೊಳಗಾಗಿ ಅಗತ್ಯ ದಾಖಲೆಗಳನ್ನು ಸಲ್ಲಿಸಲು ಸೂಚಿಸಲಾಗಿದೆ. ಉದ್ದಿಮೆ ಪರವಾನಿಗೆ, ನೀರಿನ ಗುಣಮಟ್ಟ ಪರೀಕ್ಷಾ ವರದಿ, ಆರೋಗ್ಯ ಇಲಾಖೆಯ ಅನುಮತಿ ಸೇರಿದಂತೆ ಎಲ್ಲಾ

3 ನೇ ಪುಟಕ್ಕೆ

ಕೊಪ್ಪಳ ಜಿಲ್ಲಾದ್ಯಂತ ಎಲ್ಲ ಕಡೆಗೂ ಸಮರ್ಪಕ ನೀರು ಪೂರೈಕೆಯಾಗಲಿ: ಜಿಲ್ಲಾಧಿಕಾರಿ ಡಾ.ಸುರೇಶ ಬಿ ಇಟ್ನಾಳ ನಿರ್ದೇಶನ

ಕೊಪ್ಪಳ,ಏ. 09 –

ಕೊಪ್ಪಳ ಜಿಲ್ಲೆಯ ಪಟ್ಟಣ, ನಗರ ಪ್ರದೇಶ ಮತ್ತು ಎಲ್ಲಾ ಗ್ರಾಮ ಪಂಚಾಯತ್‌ಗಳು ಸೇರಿದಂತೆ ಜಿಲ್ಲೆಯಾದ್ಯಂತ ಯಾವುದೇ ಕಡೆಗಳಲ್ಲಿ ಕಡಿಯುವ ನೀರಿನ ಸಮಸ್ಯೆಯಾಗಬಾರದು. ಬೇಸಿಗೆಯ ಈ ಅವಧಿಯಲ್ಲಿ ಕುಡಿಯುವ ನೀರು ಪೂರೈಕೆಗೆ ಮೊದಲಾದ್ಯತೆ ನೀಡಬೇಕು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಬಿ. ಇಟ್ನಾಳ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಜಿಲ್ಲಾ ಪಂಚಾಯತ್‌ನ ಜೆ.ಹೆಚ್. ಪಟೇಲ್ ಸಭಾಂಗಣದಲ್ಲಿ ಏಪ್ರಿಲ್ 8ರಂದು ಕೊಪ್ಪಳ ಸೇರಿದಂತೆ ವಿವಿಧ ತಾಲೂಕಿನ ತಹಸೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಮತ್ತು ವಿವಿಧ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ಗ್ರಾಮ ಪಂಚಾಯತ್ ವ್ಯಾಪ್ತಿಯ ಯಾವುದೇ ಹಳ್ಳಿಗಳಲ್ಲಿ ಕುಡಿಯುವ ನೀರಿನ ಬವಣೆ ಎದುರಾಗಬಹುದು ಎಂಬುದು ಗೊತ್ತಾದ ಕೂಡಲೇ ಅಲ್ಲಿ ಕುಡಿಯುವ ನೀರು ಸರಬರಾಜಿಗೆ ನ್ಯಾಯ ವ್ಯವಸ್ಥೆ ಮಾಡಿಕೊಂಡಿರಬೇಕು. ಅಂತಹ ಕಡೆಗಳಲ್ಲಿ ಮುಂಚಿತವಾಗಿಯೇ ಖಾಸಗಿ ಬೋರವೆಲ್ ಗುರುತಿಸಬೇಕು. ಮಾಲೀಕರೊಂದಿಗೆ ಮುಂಚಿತವಾಗಿಯೇ ಒಪ್ಪಂದ ಪತ್ರ ಮಾಡಿಕೊಂಡಿರಬೇಕು. ಬೋರವೆಲ್ ಮಾಲೀಕರು ಒಪ್ಪದಿದ್ದಲ್ಲಿ ಜಿಲ್ಲಾಡಳಿತದ ಗಮನಕ್ಕೆ ತರಬೇಕು ಎಂದು ಜಿಲ್ಲಾಧಿಕಾರಿಗಳು



ಬೇರೆ ಬೇರೆ ಪತ್ರಿಕೆಗಳಲ್ಲಿ ನೀರಿನ ಬವಣೆ ಬಗ್ಗೆ ವರದಿಯಾಗುತ್ತಿವೆ. ಇದನ್ನು ಗಮನಿಸಿದ್ದೀರಾ ಎಂದು ಅಧಿಕಾರಿಗಳಿಗೆ ಕೇಳಿದ ಜಿಲ್ಲಾಧಿಕಾರಿಗಳು, ಆಯಾ ತಾಲೂಕಿನ ತಹಸೀಲ್ದಾರರು ನಿರಂತರವಾಗಿ ಗ್ರಾಮ ಆಡಳಿತ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡು ಆಯಾ ಗ್ರಾಮಗಳ ಕುಡಿಯುವ ನೀರಿನ ಪರಿಸ್ಥಿತಿಯನ್ನು ಅವಲೋಕಿಸಬೇಕು ಎಂದು ಎಲ್ಲ ತಹಸೀಲ್ದಾರರಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಬೇಸಿಗೆಯ ಅವಧಿಯಲ್ಲಿ ಯಾವುದೇ ಹಳ್ಳಿಗಳಲ್ಲಿ ನೀರಿನ ಕೊರತೆಯಾಗದಂತೆ ನಿರಂತರ ನಿಗಾ ವಹಿಸಬೇಕು ಎಂದು ಎಲ್ಲ ಪಿಡಿಓಗಳಿಗೆ ಸೂಚನೆ ನೀಡಿದರು. ಎಲ್ಲ ಪಿಡಿಓಗಳ ಮೇಲೆ ಸೂಕ್ತ ಮೇಲ್ವಿಚಾರಣೆ ನಡೆಸಲು ತಾಪಂ ಇಓಗಳಿಗೆ ನಿರ್ದೇಶನ ನೀಡಿದರು.

★ಅನುದಾನ ಬೇಕಾದರೆ ತಿಳಿಸಿ:★ ಪಂಚಾಯತವಾರು ಪರಿಶೀಲನೆ ವೇಳೆ, ಕುಡಿಯುವ ನೀರು ಪೂರೈಕೆಗೆ ಅನುದಾನ ಕೊರತೆ ಇದೆಯಾ? ಎಂದು ಕೇಳಿದ ಜಿಲ್ಲಾಧಿಕಾರಿಗಳು, ಪಂಚಾಯಿತಿಯ ಸ್ಥಳೀಯ ಅನುದಾನ, 15ನೇ ಹಣಕಾಸಿನ ಅನುದಾನ ಅಥವಾ ಕರ ವಸೂಲಾತಿಗೆ ಗಮನ ಹರಿಸಿ ಅನುದಾನ ಲಭ್ಯತೆಗೆ ಒತ್ತು ಕೊಡಬೇಕು. ಅನುದಾನ ಇಲ್ಲ ಎಂದು ನೆಪ ಹೇಳಿ ನಿರ್ಲಕ್ಷ್ಯ ಮಾಡಬಾರದು ಎಂದು ಎಚ್ಚರಿಕೆ ನೀಡಿದರು. ಅವಶ್ಯಕತೆ ಇದ್ದಲ್ಲಿ ಅನುದಾನ ಬೇಡಿಕೆಯ ಪತ್ರವನ್ನು ಕೂಡಲೇ ಸಲ್ಲಿಸಬೇಕು. ಪ್ರತಿಯೊಂದು ವಿಷಯವನ್ನು ಕಡ್ಡಾಯವಾಗಿ ಜಿಲ್ಲಾ ಪಂಚಾಯತ್ ಸಿಇಓ ಅವರ ಗಮನಕ್ಕೆ ತರಬೇಕು ಎಂದು ಜಿಲ್ಲಾಧಿಕಾರಿಗಳು ಪಿಡಿಓಗಳಿಗೆ ಸೂಚನೆ ನೀಡಿದರು. ಕುಡಿಯುವ ನೀರು ಪೂರೈಕೆಗೆ ಸಂಬಂಧಿಸಿದಂತೆ ಯಾವುದೇ ರೀತಿಯ ಹಣಕಾಸಿನ ಕೊರತೆಯಿಲ್ಲ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

★ನಿಯಮಿತವಾಗಿ ಸಭೆ ನಡೆಸಿ:★ ಜಿಲ್ಲೆಯ ಎಲ್ಲ ಪಂಚಾಯತಗಳಲ್ಲಿ ಗ್ರಾಮ ನೀರು ನೈರ್ಮಲ್ಯ ಸಮಿತಿ ಸಭೆಗಳು ನಿಯಮಿತವಾಗಿ ನಡೆಯಬೇಕು. ಈ ಸಭೆಗಳಲ್ಲಿ ಕರ ವಸೂಲಾತಿ ಮತ್ತು ಕುಡಿಯುವ ನೀರಿನ ಪರಿಸ್ಥಿತಿಯ ಬಗ್ಗೆ ಗಂಭೀರವಾಗಿ ಚರ್ಚಿಸಿದಲ್ಲಿ ಯಾವುದೇ ಗ್ರಾಮಗಳಲ್ಲಿ ದಿಢೀರ್ ಎಂದು ನೀರಿನ ಸಮಸ್ಯೆ ಉದ್ಭವಿಸಲಾರದು ಎಂದು ಜಿಲ್ಲಾಧಿಕಾರಿಗಳು ಸಲಹೆ ಮಾಡಿದರು.

★ನೀರಿನ ಪರೀಕ್ಷೆ ಕಡ್ಡಾಯ:★ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ್ ವ್ಯಾಪ್ತಿಯ ಮೇಲ್ಮಟ್ಟದ ಜಲಾಗಾರಗಳು ಸದಾಕಾಲ ಶುಚಿಯಾಗಿರುವಂತೆ ನೋಡಿಕೊಳ್ಳಬೇಕು. ಕಡ್ಡಾಯವಾಗಿ ಪರೀಕ್ಷಿಸಿಯೇ ಕುಡಿಯುವ ನೀರನ್ನು ಸರಬರಾಜು ಮಾಡಬೇಕು ಎಂದು ಜಿಲ್ಲಾಧಿಕಾರಿಗಳು, ಎಲ್ಲ ಪಿಡಿಓಗಳು ಮತ್ತು ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

★ನಗರ ಪ್ರದೇಶದಲ್ಲಿ ಸಮಸ್ಯೆ ಇಲ್ಲ:★ ಕೊಪ್ಪಳ ಹಾಗೂ ಗಂಗಾವತಿ ನಗರಸಭೆ, ಕಾರಟಗಿ ಹಾಗೂ ಕುಷ್ಟಗಿ ಪುರಸಭೆ ಮತ್ತು ಯಲಬುರ್ಗಾ, ಕುಕನೂರ, ಕನಕಗಿರಿ, ಭಾಗ್ಯನಗರ, ತಾವರಗೇರಾ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡು ಬಂದಿಲ್ಲ ಎಂದು ಪೌರಾಯುಕ್ತರು, ಮುಖ್ಯಾಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

★ಕಾರಣ ಕೇಳಿ ನೋಟೀಸ್ ಜಾರಿ:★ ತುಂಗಭದ್ರಾ ಡ್ಯಾಮನಿಂದ ಕಾಲುವೆಗೆ ನೀರು ಹರಿಸಿದ್ದು ಈ ಮೊದಲೇ ನೀಡಿದ ಸೂಚನೆಯಂತೆ ಕಾಲುವೆ ವ್ಯಾಪ್ತಿಯ ಕೆರೆಗಳ ಭರ್ತಿ ಕಾರ್ಯ ನಡೆದಿದೆಯೇ ಎಂದು ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಅಭಿಯಂತರರಿಗೆ ಪ್ರಶ್ನಿಸಿದ ಜಿಲ್ಲಾಧಿಕಾರಿಗಳು, ಕಾಲುವೆಗೆ ನೀರು ಹರಿಸಿದ್ದರು ಸಹ ಕೆರೆ ಭರ್ತಿಗೆ ನಿರ್ಲಕ್ಷ್ಯ ವಹಿಸಿದ ಆರ್‌ಡಬ್ಲ್ಯುಎಸ್‌ನ ಗಂಗಾವತಿಯ ಸಹಾಯಕ ಅಭಿಯಂತರರಿಗೆ ಕಾರಣ ಕೇಳಿ ನೋಟೀಸ್ ಜಾರಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳಾದ ಟಿ.ಕೃಷ್ಣಮೂರ್ತಿ, ಸಹಾಯಕ ಆಯುಕ್ತರಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ ಸೇರಿದಂತೆ ಕೊಪ್ಪಳ, ಗಂಗಾವತಿ, ಕಾರಟಗಿ, ಕನಕಗಿರಿ, ಕುಷ್ಟಗಿ, ಯಲಬುರ್ಗಾ, ಕುಕನೂರ ತಹಸೀಲ್ದಾರರು, ತಾಪಂ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ನಗರಾಭಿವೃದ್ಧಿ ಕೋಶ, ಸಣ್ಣ ನೀರಾವರಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಅಧಿಕಾರಿಗಳು, ಎಲ್ಲ ತಾಲೂಕಿನ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಇದ್ದರು.



ಎ.20 ರಂದು ಬಸವಣ್ಣ ಜಯಂತಿ ಅದ್ದೂರಿಯಾಗಿ ಆಚರಿಸೋಣ: ಎಡಿಸಿ ಶಿವಾನಂದ್ ಕರಾಳೆ

ಬೀದರ,ಏ. 09–

ಎ.20 ರಂದು ನಡೆಯಲಿರುವ ಸಾಂಸ್ಕೃತಿಕ ನಾಯಕ, ವಿಶ್ವಗುರು ಬಸವಣ್ಣನವರ ಜಯಂತಿಯನ್ನು ಜಿಲ್ಲೆಯಲ್ಲಿ ಅದ್ದೂರಿಯಾಗಿ ಆಚರಿಸಲು ಎಲ್ಲಾ ಇಲಾಖೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ್ ಕರಾಳೆ ಹೇಳಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಯಂತಿ ದಿನದಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾಧಿಕಾರಿ ಕಚೇರಿಯಲ್ಲಿ ಬಸವಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಗುವುದು. ಬಳಿಕ ಬೆಳಿಗ್ಗೆ 10 ಗಂಟೆಗೆ ಬಸವೇಶ್ವರ ವೃತ್ತದಲ್ಲಿ ಬಸವಣ್ಣನವರ ಮೂರ್ತಿಗೆ ಮಾಲಾರ್ಪಣೆ ನೆರವೇರಿಸಲಾಗುತ್ತದೆ. ಬೆಳಿಗ್ಗೆ 11 ಗಂಟೆಗೆ ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ ಎಂದು ಮಾಹಿತಿ ನೀಡಿದರು.

ಬಸವಣ್ಣ ಜಯಂತಿಯ ಅಂಗವಾಗಿ ಎಲ್ಲಾ ಶಾಲಾ ಕಾಲೇಜುಗಳಲ್ಲಿ ಭಾವಚಿತ್ರ ಪೂಜೆ ನಡೆಸಬೇಕು. ಜೊತೆಗೆ ಬಸವಣ್ಣನವರ ವಚನಗಳ ಕುರಿತು ಪ್ರಬಂಧ ಹಾಗೂ ಭಾಷಣ ಸ್ಪರ್ಧೆಗಳನ್ನು ಆಯೋಜಿಸುವಂತೆ ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಮಹನೀಯರ ವೃತ್ತಗಳಿಗೆ ದೀಪಾಲಂಕಾರ, ರಸ್ತೆ ಸುತ್ತಮುತ್ತ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಮಹಾನಗರ ಪಾಲಿಕೆ ವತಿಯಿಂದ ಕಲ್ಪಿಸಬೇಕು ಎಂದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕಲಾ ತಂಡಗಳ ವ್ಯವಸ್ಥೆ ಹಾಗೂ ಪೊಲೀಸ್ ಇಲಾಖೆಯಿಂದ ಸೂಕ್ತ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಲು ಸೂಚಿಸಿದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ್ ಪೂಜಾರ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶರಣಪ್ಪ ಕೊಟ್ಟಪಗೋಳ್, ಸಂಚಾರಿ ನಿರೀಕ್ಷಕ ರಮೇಶ್ ಮೈಲೂರಕರ್, ಕನ್ನಡ ಮತ್ತು ಸಾಂಸ್ಕೃತಿಕ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ್ ಶಿಂಧೆ, ಬಸವಣ್ಣರ ಜಯಂತ್ಯೋತ್ಸವ ಸಮಿತಿಯ ಅಧ್ಯಕ್ಷ ಡಾ.ರಜನೀಶ್ ವಾಲಿ, ಕಾರ್ಯದರ್ಶಿ ಹಾಗೂ ಮಹಾನಗರ ಪಾಲಿಕೆ ಸದಸ್ಯ ಶಶಿಧರ್ ಹೊಸಳ್ಳಿ, ಮುಖಂಡರಾದ ಬಸವರಾಜ್ ಧನ್ನೂರ್, ಶಿವಶರಣಪ್ಪಾ ವಾಲಿ, ಜಗನ್ನಾಥ್ ಹೆಬ್ಬಾಳೆ, ದೀಪಕ್ ವಾಲಿ, ಚಂದ್ರಶೇಖರ್ ಪಾಟೀಲ್ ಗಾದಗಿ, ಸೋಮಶೇಖರ್ ಪಾಟೀಲ್ ಗಾದಗಿ, ಮಹೇಶ್ ಗೋಳನಾಳಕರ್, ವಿಜಯಕುಮಾರ್ ಮಾಳಗೆ, ಮಾರುತಿ ಬೌದ್ಧೆ, ವಿಜಯಕುಮಾರ್ ಸೋನಾರೆ, ಅಭಿ ಕಾಳೆ, ಶಾಮಣ್ಣ ಬಾವಗಿ, ಶಿವಶಂಕರ್ ಟೋಕರೆ, ಓಂಪ್ರಕಾಶ್ ರೊಟ್ಟೆ, ಶಶಿಕುಮಾರ್ ಪಾಟೀಲ್ ಸಂಗಮ್, ಸಿದ್ರಾಮಯ್ಯ ಸ್ವಾಮಿ ಹಾಗೂ ಮಾಣಿಕೇಶ್ ಪಾಟೀಲ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಂಘ ಸಂಸ್ಥೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಬಳ್ಳಾರಿ ಜಿಲ್ಲೆಯಲ್ಲಿ 2,591 ಹೆಣ್ಣು ಮಕ್ಕಳಿಗೆ ಹೆಚ್‌ಪಿವಿ ಲಸಿಕೆ: ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ

ಬಳ್ಳಾರಿ,ಏ.09–

ಜಿಲ್ಲೆಯಲ್ಲಿ 14 ವರ್ಷದ ಹೆಣ್ಣು ಮಕ್ಕಳಲ್ಲಿ ಈವರೆಗೆ 2,591 ಹೆಣ್ಣು ಮಕ್ಕಳಿಗೆ ಹೆಚ್‌ಪಿವಿ (ಹ್ಯೂಮನ್ ಪ್ಯಾಪಿಲೋಮ ವೈರಸ್) ಲಸಿಕೆ ನೀಡಲಾಗಿದೆ ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಜಿಲ್ಲೆಯ 16,49,492 ಒಟ್ಟು ಜನಸಂಖ್ಯೆಯಲ್ಲಿ ಶೇ.01 ರಷ್ಟು 14 ವರ್ಷದ ಹೆಣ್ಣು ಮಕ್ಕಳು ಅಂದರೆ 16,495 ಹೆಣ್ಣು ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿತ್ತು. ಇಲ್ಲಿಯವರೆಗೆ ಒಟ್ಟು 2,591 ಹೆಣ್ಣು ಮಕ್ಕಳಿಗೆ ಲಸಿಕೆ ನೀಡಲಾಗಿದೆ. ಯಾರಿಗೂ ಯಾವುದೇ ರೀತಿಯ ಅಡ್ಡ ಪರಿಣಾಮ ಬೀರಿಲ್ಲ ಎಂದು ಅವರು ಹೇಳಿದ್ದಾರೆ.

ಸಾಮಾಜಿಕ ಜಾಲತಾಣಗಳಲ್ಲಿ ಕೆಲವೊಂದು ತಪ್ಪು ಮಾಹಿತಿ ಪ್ರಸಾರವಾಗುತ್ತಿರುವುದು ಕಂಡುಬರುತ್ತಿದ್ದು, ಈ ಕುರಿತು ಪಾಲಕರು ಕಿವಿಕೊಡದೇ ತಮ್ಮ 14 ವರ್ಷದ ಹೆಣ್ಣು ಮಕ್ಕಳ ಉತ್ತಮ ಆರೋಗ್ಯಕ್ಕೆ ಹೆಚ್.ಪಿ.ವಿ ಲಸಿಕೆಯನ್ನು ತಪ್ಪದೇ ಹಾಕಿಸಬೇಕು ಎಂದು ಮನವಿ ಮಾಡಿದ್ದಾರೆ.

ಈ ಲಸಿಕಾ ಕಾರ್ಯಕ್ರಮ ಈಗಾಗಲೇ ಮಾರ್ಚ್ 11 ರಿಂದ ಆರಂಭವಾಗಿದ್ದು, 90 ದಿನಗಳವರೆಗೆ ಮುಂದುವರೆಯಲಿದೆ. 14 ವರ್ಷದ ಎಲ್ಲಾ ಹೆಣ್ಣು ಮಕ್ಕಳು ಈ ಹೆಚ್‌ಪಿವಿ ಲಸಿಕೆ ಪಡೆಯಲು ಅರ್ಹರಿರುತ್ತಾರೆ. ಲಸಿಕೆ ಪಡೆಯುವುದರಿಂದ ಗರ್ಭಕಂಠದ ಕ್ಯಾನ್ಸರ್ ನ್ನು ಶೇ.99 ರಷ್ಟು ತಡೆಗಟ್ಟಬಹುದಾಗಿದೆ.

ಹಾಗಾಗಿ ಲಸಿಕೆ ಪಡೆಯಲು ಬರುವ ಫಲಾನುಭವಿಗಳು ಸೂಕ್ತ ಗುರುತಿನ ಚೀಟಿ (ಜನನ ಪ್ರಮಾಣ ಪತ್ರ) ಯೊಂದಿಗೆ ಕಡ್ಡಾಯವಾಗಿ ಪೋಷಕರನ್ನು ಜೊತೆಯಲ್ಲಿ ಕರೆದುಕೊಂಡು ಬರಬೇಕು. ಕ್ಯಾನ್ಸರ್ ಮುಕ್ತ ನಾಳೆಗಾಗಿ ಇಂದೆ ಇರಲಿ ಲಸಿಕೆಯ



ಸುರಕ್ಷೆ ಎಂದು ತಿಳಿಸಿದ್ದಾರೆ.

ಹೆಣ್ಣು ಮಕ್ಕಳ ಜೀವನದಲ್ಲಿ ಗಂಭೀರ ಆರೋಗ್ಯ ಸಮಸ್ಯೆಯನ್ನುಂಟು ಮಾಡುವ ಗರ್ಭಕಂಠದ ಕ್ಯಾನ್ಸರ್ ತಡೆಗೆ 14 ವರ್ಷದ ಹೆಣ್ಣು ಮಕ್ಕಳಿಗೆ ಜಿಲ್ಲೆಯಲ್ಲಿ ಉಚಿತ ಹೆಚ್.ಪಿ.ವಿ ಹ್ಯೂಮನ್ ಪ್ಯಾಪಿಲೋಮ ವೈರಸ್ ವಿರುದ್ಧದ ಲಸಿಕೆ ಹಾಕಲಾಗುತ್ತಿದ್ದು, ಪಾಲಕರು ತಮ್ಮ ಮಕ್ಕಳಿಗೆ ತಪ್ಪದೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಲಸಿಕೆ ಹಾಕಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಸಹ ಕೋರಿದ್ದಾರೆ.

ಸಾಮಾನ್ಯವಾಗಿ ವೈಯಕ್ತಿಕ ಶುಚಿತ್ವ, ಜನನಾಂಗಗಳಲ್ಲಿ ತೊಂದರೆ, ಹುಣ್ಣು ಅಸುರಕ್ಷಿತ ಲೈಂಗಿಕ ಸಂಪರ್ಕದಿದ ಹರಡುವ ಹ್ಯೂಮನ್ ಪ್ಯಾಪಿಲೋಮ ವೈರಸ್ (ಹೆಚ್.ಪಿ.ವಿ) ಸೋಂಕು ಕ್ರಮೇಣ ಗರ್ಭಕಂಠದ ಜೀವಕೋಶಗಳಲ್ಲಿ ಬದಲಾವಣೆಗಳಾಗಿ ಕ್ಯಾನ್ಸರ್ ಆಗಿ ಬದಲಾಗುವ ಸಂಭವವಿರುತ್ತದೆ. ಈ ಹಿನ್ನಲೆಯಲ್ಲಿ ಆರೋಗ್ಯಕ್ಕೆ ಮಾರಕವಾಗುವ ರೋಗ ತಡೆಯಲು ಹೆಚ್.ಪಿ.ವಿ ಲಸಿಕೆಯನ್ನು ಮಾರ್ಗಸೂಚಿಯಡಿ 14 ವರ್ಷದ ಹೆಣ್ಣು ಮಕ್ಕಳಿಗೆ ಉಚಿತವಾಗಿ ಹಾಕಲಾಗುತ್ತಿದ್ದು, ಇದರ ಸದುಪಯೋಗ ಪಡೆದುಕೊಳ್ಳಲು ಹತ್ತಿರದ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಬೇಕು ಎಂದು ವಿನಂತಿಸಿದ್ದಾರೆ.

ಶೀಘ್ರದಲ್ಲೇ ಎಂಎಸ್‌ಎಂಇಗೆ ಪ್ರತ್ಯೇಕ ಸಚಿವಾಲಯ ಸ್ಥಾಪನೆ : ಸಚಿವ ಡಾ.ಶರಣಬಸಪ್ಪ ದರ್ಶನಾಪುರ

ಕಲಬುರಗಿ,ಏ. 09 –

ರಾಜ್ಯದಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ(ಎಂಎಸ್‌ಎಂಇ)ನಿರ್ವಹಣೆಗೆ ಶೀಘ್ರದಲ್ಲೇ ಪ್ರತ್ಯೇಕ ಸಚಿವಾಲಯ ಸ್ಥಾಪನೆ ಮಾಡಲಾಗುವುದು ಎಂದು ಸಣ್ಣ ಕೈಗಾರಿಕಾ ಹಾಗೂ ಸಾರ್ವಜನಿಕ ಉದ್ದಿಮೆ ಖಾತೆ ಸಚಿವ ಡಾ.ಶರಣಬಸಪ್ಪ ದರ್ಶನಾಪುರ ಅವರು ಭರವಸೆ ನೀಡಿದ್ದಾರೆ.

ನಗರದ ಸೂಪರ್ ಮಾರ್ಕೆಟ್ ಪ್ರದೇಶದ ಕೆ.ಕೆ.ಸಿ.ಸಿ.ಐ ಸಂಸ್ಥೆಯ ಎಸ್.ಆರ್. ರಘೋಜಿ ಸಭಾಂಗಣದಲ್ಲಿ ಬುಧವಾರ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಎಂ.ಎಸ್.ಎಂ.ಇ ಘಟಕಗಳಿಗೆ ಸಂಬಂಧಪಟ್ಟಂತೆ ಹೊಸ ಕೈಗಾರಿಕಾ ನೀತಿ ನಿಮಿತ್ತ ಕಲಬುರಗಿ ವಿಭಾಗ ಮಟ್ಟದ ಪಾಲುದಾರರ ಸಮಾಲೋಚನ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದೇಶದ ವಿವಿಧ ಭಾಗಗಳಲ್ಲಿ ಎಂಎಸ್‌ಎಂಇ ಗೆ ಪ್ರತ್ಯೇಕ ಸಚಿವಾಲಯ ಇದೆ. ಅದರಂತೆಯೇ ನಮ್ಮ ರಾಜ್ಯದಲ್ಲೂ ಈ ಸಚಿವಾಲಯ ಆಗಬೇಕೆಂದು ಸಿಎಂ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಲಾಗಿದೆ. ಹೀಗಾಗಿ ಎಂಎಸ್‌ಎಂಇಗೆ ಪ್ರತ್ಯೇಕ ಇಲಾಖೆ ರಚನೆ ಆಗಲಿದೆ ಎಂದರು.

ನಮ್ಮ ಸರ್ಕಾರ ಆರ್ಥಿಕತೆ ಸದೃಢತೆಯಾಗುವ ಮಾಡುವ ನೀತಿ ಆಡುತ್ತದೆ, ಈ ಭಾಗದಲ್ಲಿ ಹೆಚ್ಚಿನ ಪ್ರೋತ್ಸಾಹ ನೀಡಿದರೆ ಕೈಗಾರಿಕೆಗಳು ಬರಲಿವೆ. ನಮ್ಮ ಉದ್ದೇಶ ರಾಜಧಾನಿ ಬೆಂಗಳೂರು ಸೀಮಿತ ಮಾಡದೆ ಕಲ್ಯಾಣ ಕರ್ನಾಟಕ, ಮುಂಬೈ ಕರ್ನಾಟಕಕ್ಕೆ ಉತ್ತಮ ಕೈಗಾರಿಕಾ ಯೋಜನೆಗಳು ತರಲು ಯೋಜಿಸಿದ್ದೇವೆ. ಹಾಗಾಗಿ ಡಾ.ನಂಜುಂಡಪ್ಪ ವರದಿ ಆಧರಿಸಿ ಈ ಭಾಗದಲ್ಲಿ ದೊಡ್ಡ ಕೈಗಾರಿಕೆ ಸ್ಥಾಪನೆಗೆ ವಿಶೇಷ ಸವಲತ್ತು ನೀಡಬೇಕಾಗಿದೆ ಎಂದು ಅಭಿಪ್ರಾಯಪಟ್ಟರು.

ಜಿಲ್ಲಾಧಿಕಾರಿ ಬಿ.ಫೌಝಿಯಾ ತರನ್ನುಮ್ ಮಾತನಾಡಿ, ಕಲಬುರಗಿ ನಗರದ ಮೂರನೇ ಹಂತದ ಕೈಗಾರಿಕಾ ಪ್ರದೇಶಕ್ಕಾಗಿ ಭೂಮಿಯ ಸ್ವಾಧೀನಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ. ಕೈಗಾರಿಕೆಗಳ ಆಕರ್ಷಣೆಗಾಗಿ ಜಿಲ್ಲಾ ಹಾಗೂ ರಾಜ್ಯಮಟ್ಟದಲ್ಲಿ ಸಭೆಗಳನ್ನು



ನಡೆಸಿ, ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ. ಕಲಬುರಗಿ ರೊಟ್ಟಿ ಜಾಗತಿಕ ಮಟ್ಟದಲ್ಲಿ ಬ್ರಾಂಡಿಂಗ್ ಮಾಡಿದ್ದೇವೆ. ಇಲ್ಲಿನ ಮಹಿಳೆಯರು ತಿಂಗಳಿಗೆ 25 ರಿಂದ 35 ಸಾವಿರ ಆದಾಯ ಗಳಿಸುತ್ತಿದ್ದಾರೆ. ಜಿಲ್ಲೆಯಲ್ಲಿ ಬಹಳಷ್ಟು ಟ್ಯಾಲೆಂಟ್ ಇದ್ದಾರೆ, ಅವರನ್ನು ಹೊರತರುವುದು ನಮ್ಮ ಕರ್ತವ್ಯವಾಗಿದೆ ಎಂದು ಹೇಳಿದರು.

ಗೌರವ ಕಾರ್ಯದರ್ಶಿ ಶಿವರಾಜ್ ಇಂಗಿನಶೆಟ್ಟಿ ಮಾತನಾಡಿ, ದಾಲ್ ಮಿಲ್ ಟೆಂಡರ್ ಗೆ ಪ್ರಕ್ಯೂರ್ ಮೆಂಟ್ ನಮ್ಮ ಭಾಗದವರಿಗೆ ಅವಕಾಶ ನೀಡಬೇಕು, ಜಾಸ್ತಿ ಪ್ರೋತ್ಸಾಹಧನ ಹಾಗೂ ಹೆಚ್ಚಿನ ಸಾಲದ ವ್ಯವಸ್ಥೆ ಬ್ಯಾಂಕಿನಿಂದ ಕೊಡಿಸಬೇಕು ಎಂದು ಒತ್ತಾಯಿಸಿದರು.

ಎಂಎಸ್‌ಎಂಇ ಇಲಾಖೆಯ ಹೆಚ್ಚುವರಿ ನಿರ್ದೇಶಕ ಮಣಿಕ್ ವಿ. ರಾಘೋಜಿ ಸ್ವಾಗತಿಸಿ, ಪ್ರಾಸ್ತಾವಿಕ ನುಡಿಗಳನ್ನಾಡಿದರು. ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಅಬ್ದುಲ್ ಅಝೀಮ್ ಅವರು ವಂದಿಸಿದರು.

ಈ ಸಂದರ್ಭದಲ್ಲಿ ಶಶಿಕಾಂತ್ ಬಿ. ಪಾಟೀಲ್, ಎಂಎಸ್‌ಎಂಇ ಸಮಿತಿಯ ಅಧ್ಯಕ್ಷ ಅಭಿಜೀತ್ ಆರ್. ಪಡಶೆಟ್ಟಿ, ರಾಯಚೂರು ವಾಣಿಜ್ಯ ಸಂಸ್ಥೆಯ ಕಾರ್ಯದರ್ಶಿ ಜಂಬಣ್ಣ ಏಕಲಸಪುರ, ಯಾದಗಿರಿ ಚೇಂಬರ್ ಆಫ್ ಕಾಮರ್ಸ್ ಉಪಾಧ್ಯಕ್ಷ ವಿಷ್ಣುದಾಸ ಅವರು ವೇದಿಕೆಯ ಮೇಲಿದ್ದರು. ಉದ್ಯಮಿಗಳು, ಕೈಗಾರಿಕೋದ್ಯಮಿಗಳು, ಆರ್ಥಿಕ ತಜ್ಞರು, ಸ್ಟಾರ್ಟ್‌ಅಪ್‌ಗಳು ಸೇರಿದಂತೆ ವಿವಿಧ ವಲಯಗಳ ಹಿತಧಾರಕರು ಪಾಲ್ಗೊಂಡಿದ್ದು, ಹಲವರು ಅಭಿಪ್ರಾಯ ವ್ಯಕ್ತಪಡಿಸಿದರು.

ಕಾರ್ಯಾಗಾರವನ್ನು ದೊಡ್ಡಪ್ಪ ನಿಸ್ಟಿ, ಅನಿರುದ್ಧ ಶೆಟ್ಟಿ, ಶ್ರೀಧರ್ ಸರಾಫ್ ಹಾಗೂ ಬೆಂಗಳೂರು ಮೂಲದ ತಜ್ಞರ ತಂಡ ನಡೆಸಿಕೊಟ್ಟು, ಹಿತಧಾರಕರ ಅಭಿಪ್ರಾಯಗಳನ್ನು ಸಂಗ್ರಹಿಸಿತು.

ಕಾರ್ಯಕ್ರಮದಲ್ಲಿ ಉದ್ಯಮಿಗಳಾದ ಉಮಕಾಂತ್ ನಿಗುಡ್ಗಿ, ದಾಲ್ ಮಿಲ್ಲರ್ಸ್ ಅಸೋಸಿಯೇಷನ್ ನ ಬಸವರಾಜ ಜೋಗೂರ, ಹನುಮಂತರಾವ್ ತೊಟ್ನಳ್ಳಿ, ಉತ್ತಮ್ ಬಜಾಜ್, ಬಸವರಾಜ ಕುಮ್ನೂರು, ಭೀಮಾಶಂಕರ್ ಪಾಟೀಲ್, ರವಿ ಮುಕ್ಕಾ, ರವೀಂದ್ರ ಮಡಂಶೆಟ್ಟಿ, ಪ್ರೀತೇಶ್ ತಪಾಡಿಯಾ, ಸುನಿಲ್ ಪಾಟೀಲ್ (ಸರಡಗಿ), ಗಿರೀಶ್ ಗಿಲ್ಡಾ, ಅಜಯ್ ಮಡ್ಜುಂಕಿ, ಫರೂಕ್ ಪಂಜಾ, ಮುಕ್ತಾ ಜೇಗರ್ಕಲ್, ಶಾಂತರೆಡ್ಡಿ ಪೆಟ್ನೇರೂರು, ವಿನಯ ಚಿಕಟವಾರ್ ಉಪಸ್ಥಿತರಿದ್ದರು.

ಮದ್ಯ ವ್ಯಸನಿಗಳಾಗದೆ ಆರೋಗ್ಯಕರ ಜೀವನ ನಡೆಸಿ: ಅರುಣ್ ಚಕ್ರವರ್ತಿ

ಕಲಬುರಗಿ,ಏ. 09

ಮದ್ಯಪಾನವು ವ್ಯಕ್ತಿಯ ಆರೋಗ್ಯವನ್ನಷ್ಟೇ ಅಲ್ಲದೆ ಕುಟುಂಬದ ನೆಮ್ಮದಿಯನ್ನೂ ಹಾಳುಮಾಡುತ್ತದೆ. ಆದ್ದರಿಂದ ವ್ಯಸನಕ್ಕೆ ದಾಸರಾಗದೇ, ಅದರಿಂದ ಹೊರಬಂದು ಗೌರವಯುತ ಜೀವನ ನಡೆಸಲು ಸಂಕಲ್ಪ ಮಾಡಬೇಕು ಎಂದು ರಾಜ್ಯ ಪೊಲೀಸ್ ವಸತಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಅರುಣ್ ಚಕ್ರವರ್ತಿ ಹೇಳಿದರು.



ನಗರ ಪೊಲೀಸ್ ಆಯುಕ್ತಾಲಯದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮದ್ಯಪಾನವನ್ನು ಕೇವಲ ಸಾಮಾಜಿಕ ಕಳಂಕವೆಂದು ನೋಡುವುದಕ್ಕಿಂತ, ಚಿಕಿತ್ಸೆ ಮೂಲಕ ಗುಣಪಡಿಸಬಹುದಾದ ಕಾಯಿಲೆಯಾಗಿ ಪರಿಗಣಿಸಬೇಕು ಎಂದು ಅಭಿಪ್ರಾಯಪಟ್ಟರು. ವಿಶ್ವ ಆರೋಗ್ಯ ಸಂಸ್ಥೆ ಈಗಾಗಲೇ 1956ರಲ್ಲೇ ಮದ್ಯವ್ಯಸನವನ್ನು ಕಾಯಿಲೆಯಾಗಿ ವರ್ಗೀಕರಿಸಿದೆ ಎಂದು ತಿಳಿಸಿದರು.

ಮಧುಮೇಹ ಅಥವಾ ರಕ್ತದೊತ್ತಡ ಇರುವವರಂತೆ ಮದ್ಯವ್ಯಸನಿಗಳನ್ನು ಸಮಾಜ ತಿರಸ್ಕರಿಸಬಾರದು. ಅವರಿಗೆ ವೈದ್ಯಕೀಯ ಚಿಕಿತ್ಸೆ ಹಾಗೂ ಮಾನಸಿಕ ಬೆಂಬಲ ನೀಡುವ ಮೂಲಕ ಈ ವ್ಯಸನದಿಂದ ಹೊರತರುವ ಪ್ರಯತ್ನ ಮಾಡಬೇಕು ಎಂದರು.

ಪೊಲೀಸ್ ಇಲಾಖೆಯಲ್ಲಿನ ಒತ್ತಡದ ಕುರಿತು ಮಾತನಾಡಿದ ಅವರು, ಸಿಬ್ಬಂದಿಗಳ ಮಾನಸಿಕ ಆರೋಗ್ಯ ಕಾಪಾಡಲು ವೆಲ್-ಬೀಯಿಂಗ್ ಆಫೀಸರ್ಸ್ ಪರಿಕಲ್ಪನೆಯನ್ನು ಜಾರಿಗೆ ತಂದಿದ್ದೇವೆ. ಒತ್ತಡದ ಕಾರಣಕ್ಕೆ ಮದ್ಯದ ದಾಸರಾಗಬಾರದು ಎಂದು ಕೌನ್ಸೆಲಿಂಗ್ ಮತ್ತು ಮಾರ್ಗದರ್ಶನ ನೀಡಲಾಗುತ್ತಿದೆ ಎಂದರು.

ಅದೇ ವೇಳೆ ಸಂಸ್ಥೆಯ ಕಾರ್ಯವೈಖರಿಯನ್ನು ವಿವರಿಸಿದ ಅವರು, ಇದು 168ಕ್ಕೂ ಹೆಚ್ಚು ದೇಶಗಳಲ್ಲಿ ಸಕ್ರಿಯವಾಗಿರುವ ಸ್ವಯಂಸೇವಾ ಸಂಘಟನೆ ಆಗಿದ್ದು, ವ್ಯಸನಿಗಳಿಗೆ ಪರಸ್ಪರ ಬೆಂಬಲದ ಮೂಲಕ ಮದ್ಯಪಾನ ತ್ಯಜಿಸಲು ಸಹಕಾರಿಯಾಗುತ್ತಿದೆ. ಇದು ಉಚಿತ ಮತ್ತು ಗೌಪ್ಯ ಸೇವೆಯಾಗಿದ್ದು, ಅನೇಕರು ಇದರ ಮೂಲಕ ಹೊಸ ಜೀವನವನ್ನು ಆರಂಭಿಸಿದ್ದಾರೆ ಎಂದು ಹೇಳಿದರು.

ಮದ್ಯವ್ಯಸನದಿಂದ ಮುಕ್ತರಾಗಿ ಸಮಾಜದಲ್ಲಿ ಘನತೆಯಿಂದ ಬದುಕುವುದು ಅತ್ಯಂತ ಅಗತ್ಯವಾಗಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ. ಹಾಗೂ ಈಶಾನ್ಯ ವಲಯ ಪೊಲೀಸ್ ಉಪಮಹಾನಿರೀಕ್ಷಕ ಶಾಂತನು ಸಿನ್ಹಾ ಉಪಸ್ಥಿತರಿದ್ದರು.

ಶ್ರೀ ಶಂಕರಾಚಾರ್ಯ ಜಯಂತಿ: ಪೂರ್ವಭಾವಿ ಸಭೆ

ಅರ್ಥಪೂರ್ಣ ಜಯಂತಿ ಆಚರಣೆಗೆ ಕ್ರಮ ವಹಿಸಿ: ಎಡಿಸಿ ಸಿದ್ರಾಮೇಶ್ವರ

ಕೊಪ್ಪಳ ಏ.09–

ಜಿಲ್ಲಾಡಳಿತ ಹಾಗೂ ಶ್ರೀ ಶಂಕರ ಸೇವಾ ಸಮಿತಿ ಕೋಟೆ(ರಿ) ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಏಪ್ರಿಲ್ 21 ರಂದು ಆಚರಿಸಲಾಗುವ ಶ್ರೀ ಶಂಕರಾಚಾರ್ಯರ ಜಯಂತಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಕ್ರಮ ವಹಿಸಿ ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅಧಿಕಾರಿಗಳಿಗೆ ಸೂಚಿಸಿದರು.

ಅವರು ಬುಧವಾರದಂದು ಶ್ರೀ ಶಂಕರಾಚಾರ್ಯರ ಜಯಂತಿ ಅಂಗವಾಗಿ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಏ.21 ರಂದು ಸಂಜೆ 4 ಗಂಟೆಗೆ ಶ್ರೀ ಶಂಕರ ಸಾಂಸ್ಕೃತಿಕ ಭವನದಿಂದ ಶ್ರೀ ಶಂಕರಾಚಾರ್ಯರ ಭಾವಚಿತ್ರದ ಮೆರವಣಿಗೆ ನಡೆಯಲಿದ್ದು, ಮೆರವಣಿಗೆಯು ನಗರದ ಗಡಿಯಾರ ಕಂಬ, ಟಾಂಗಾ ಕೂಟ, ವಾರಕರ ಓಣಿ ಮಾರ್ಗವಾಗಿ ಸಂಚರಿಸಿ ಶ್ರೀ ಶಂಕರ ಸಾಂಸ್ಕೃತಿಕ ಭವನವನ್ನು ತಲುಪುತ್ತದೆ. ಸಂಜೆ 6 ಗಂಟೆಗೆ ನಗರದ ಕೋಟೆ



ಪ್ರದೇಶದಲ್ಲಿರುವ ಶ್ರೀ ಶಂಕರ ಸಾಂಸ್ಕೃತಿಕ ಭವನದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಮೆರವಣಿಗೆ ಹಾಗೂ ವೇದಿಕೆ ಕಾರ್ಯಕ್ರಮದಲ್ಲಿ ಶುದ್ಧ ಕುಡಿಯುವ ನೀರು ಹಾಗೂ ಅಗತ್ಯ ಸಿದ್ಧತೆಗಳನ್ನು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಸಮಾಜದ ಬಾಂಧವರ ಸಹಕಾರದೊಂದಿಗೆ ಅರ್ಥಪೂರ್ಣವಾಗಿ ಜಯಂತಿ ಆಚರಿಸಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದರು. ಸಮಾಜದ ಬಾಂಧವರು ಕೂಡ ಶಿಷ್ಟಾಚಾರದ ಉಲ್ಲಂಘನೆಯಾಗದಂತೆ ಅಧಿಕಾರಿಗಳೊಂದಿಗೆ ಸಹಕರಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ, ಆಹಾರ ಇಲಾಖೆಯ ಉಪನಿರ್ದೇಶಕರಾದ ವಿಶ್ವನಾಥಗೌಡ ಎಂ.ಎನ್., ಡಿಸಿಎಫ್ ಕಚೇರಿಯ ಮಲ್ಲಿಕಾರ್ಜುನ ಗೌಡ್ರ, ಎಎಸ್‌ಐ ವೀರಭದ್ರಪ್ಪ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವ್ಹಿ.ಪಿ., ಸಮಾಜದ ಮುಖಂಡರಾದ ಡಿ.ವಿ.ಜೋಶಿ, ರಮೇಶ ಪದಕಿ, ಅಶೋಕ ಪದಕಿ, ರವಿ ಪುರೋಹಿತ, ಬಾಳಂಭಟ್ ಜೋಶಿ, ವಿನಾಯಕ ಜೋಶಿ, ಸೇರಿದಂತೆ ಸಮಾಜದ ಇತರೆ ಮುಖಂಡರು, ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿ ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ರಾಯಚೂರು ನಗರ ಅಧ್ಯಕ್ಷರಾಗಿ ಶಬೀರ್ ಅಹ್ಮದ್ ಹೌದಡಿ ನೇಮಕ

ಪಕ್ಷದ ಸಂಘಟನೆಯನ್ನು ಬಲಪಡಿಸಿ, ಸಮಾಜದ ಸಾಮಾಜಿಕ ಹಾಗೂ ರಾಜಕೀಯ ಅಭಿವೃದ್ಧಿಗಾಗಿ ಶ್ರಮಿಸುತ್ತೇನೆ. ಸಂವಿಧಾನದ ಆಶಯಗಳಿಗೆ ಧಕ್ಕೆ ಬಾರದಂತೆ ಎಲ್ಲಾ ಸಮುದಾಯಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸ ಮಾಡುತ್ತೇನೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಶಬೀಜ್ ಖಾನ್, ತನವೀರ್ಖಾನ್, ಅಲೀಂ ಪಾಶ, ಬಾಬ, ಶಬೀರ್ ಅಹ್ಮದ್ ಪಕ್ಷದ ಮುಖಂಡರು

ಏ.11, 12ಕ್ಕೆ ಬೀದರ್‌ನಲ್ಲಿ ಕಾರ್ಯನಿರತ ಪತ್ರಕರ್ತರ 40ನೇ ರಾಜ್ಯ ಸಮ್ಮೇಳನ: ಆರ್.ಗುರುನಾಥ

ಪತ್ರಕರ್ತರು ಸಮ್ಮೇಳನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಗುರುನಾಥ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಜಿಲ್ಲಾ ಕಾರ್ಯದರ್ಶಿ ಸಿದ್ದಯ್ಯ ಸ್ವಾಮಿ, ರಾಜ್ಯ ಸಮಿತಿ ಸದಸ್ಯರಾದ ಬಸವರಾಜ ನಾಗಡದಿನ್ನಿ, ಅರವಿಂದ ಕುಲಕರ್ಣಿ, ಜಿಲ್ಲಾ ಖಜಾಂಚಿ ಮಲ್ಲಿಕಾರ್ಜುನ ಸ್ವಾಮಿ ಸೇರಿದಂತೆ ಇತರ ಪತ್ರಕರ್ತರು ಉಪಸ್ಥಿತರಿದ್ದರು.

ಸಚಿವ ಶರಣಪ್ರಕಾಶ ಪಾಟೀಲ ಉಚ್ಚಾಟನೆಗೆ ಆಗ್ರಹಿಸಿ ಮಾದಿಗ ದಂಡೋರ ಸಂಘಟನೆಯಿಂದ ಮನವಿ

ಜಿಲ್ಲೆಗೆ ಎರಡು ಬಾರಿ ಉಸ್ತುವಾರಿ ಸಚಿವರಾಗಿದ್ದರೂ ಜಿಲ್ಲೆಯಲ್ಲಿ ಅಭಿವೃದ್ಧಿ ಕೆಲಸಗಳು ಕಂಡುಬಂದಿಲ್ಲ ಎಂದು ಆರೋಪಿಸಿರುವ ಸಂಘಟನೆ, ರಾಷ್ಟ್ರ ನಾಯಕರ ಕಾರ್ಯಕ್ರಮಕ್ಕೂ ಹಾಜರಾಗದಂತಹ ಸಚಿವರನ್ನು ತಕ್ಷಣವೇ ಸಚಿವ ಸ್ಥಾನದಿಂದ ಉಚ್ಚಾಟನೆ ಮಾಡಬೇಕು ಎಂದು ಸರ್ಕಾರವನ್ನು ಆಗ್ರಹಿಸಿದೆ.

ಇದಲ್ಲದೆ ರಾಜ್ಯದಲ್ಲಿ ಸುಮಾರು 38 ಲಕ್ಷ ಜನಸಂಖ್ಯೆ ಹೊಂದಿರುವ ಮಾದಿಗ ಸಮುದಾಯವನ್ನು ಕಡೆಗಣಿಸಲಾಗಿದೆ ಎಂದು ಆರೋಪಿಸಿ, ಒಳಮೀಸಲಾತಿ ಜಾರಿಗೆ ತರಬೇಕು ಎಂದು ಒತ್ತಾಯಿಸಲಾಗಿದೆ. ಏಪ್ರಿಲ್ 9 ಮತ್ತು 10ರಂದು ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಒಳಮೀಸಲಾತಿ ಜಾರಿಗೆ ತಂದು ಸಾವಿರ ಹುದ್ದೆಗಳನ್ನು ಒಳಮೀಸಲಾತಿ ಆಧಾರದಲ್ಲಿ ಭರ್ತಿ ಮಾಡಬೇಕು ಎಂದು ಮನವಿಯಲ್ಲಿ ಹೇಳಲಾಗಿದೆ.

ಈ ಬೇಡಿಕೆಗಳನ್ನು ಈಡೇರಿಸದಿದ್ದಲ್ಲಿ ಮುಂದಿನ ಚುನಾವಣೆಗಳಲ್ಲಿ ಕಾಂಗ್ರೆಸ್ ವಿರುದ್ಧ ಮತ ಚಲಾಯಿಸಲಾಗುವುದು ಹಾಗೂ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಮತ್ತು ಸಚಿವರಿಗೆ ವಿರುದ್ಧ ಪ್ರತಿಭಟನೆಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಸಂಘಟನೆ ಎಚ್ಚರಿಕೆ ನೀಡಿದೆ.ಈ ಸಂದ್ರಬಾದಲ್ಲಿ ಹೇಮರಾಜ್ ಆಸ್ಕಿಹಾಳ್,ಊರಕುಂದಿ, ತಯಪ್ಪ ಗಧಾರ್ ಆಂಜಿನೇಯ, ಲಕ್ಷ್ಮಣ್ ಇತರರು ಉಪಸ್ಥಿತರಿದ್ದರು...

ಮಾತೃ ವಂದನ ಬೃಹತ್ ಸಮಾವೇಶ 11ರಂದು: ರಾಜಾಚಂದ್ರ, ರಾಮನಗೌಡ

8ರವರೆಗೆ ನಗರದ ಶ್ರೀ ರಾಮ ಲಿಂಗೇಶ್ವರ ದೇವಸ್ಥಾನದ ಆವರಣದಲ್ಲಿ ಸಮಾವೇಶ ನಡೆಯಲಿದ್ದು, ಶಿವಸೇನಾ (ಕರ್ನಾಟಕ) ರಾಜ್ಯಾಧ್ಯಕ್ಷ ಸಿದಲಿಂಗ ಸ್ವಾಮೀಜಿ, ರಾಜ್ಯ ಪ್ರಧಾನ ಕಾರ್ಯದರ್ಶಿ ಗಂಗಾಧರ್ ಕುಲಕರ್ಣಿ ಸೇರಿದಂತೆ ಏಕನಾಥ್ ಶಿಂದೆ ಬಣದ ಪ್ರಮುಖ ಮುಖಂಡರು ಭಾಗವಹಿಸಲಿದ್ದಾರೆ.

ದೇಶಪ್ರೇಮಿಗಳು ಹಾಗೂ ಹಿಂದೂ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ರಾಜಾಚಂದ್ರ, ರಾಮನಗೌಡ ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಹರೀಶ್ ಮಡಿವಾಳ್, ಪ್ರಭು ಮಡಿವಾಳ್, ವೀರೇಂದ್ರ ಗೌಳಿ, ಸಂತೋಷ್ ಗೌಳಿ ಉಪಸ್ಥಿತರಿದ್ದರು.

ಗುತ್ತಿಗೆ ಪದ್ಧತಿ ರದ್ದು, ಕನಿಷ್ಠ ವೇತನ ಹೆಚ್ಚಳಕ್ಕೆ ಒತ್ತಾಯಿಸಿ (ಎಐಸಿಸಿಟಿಯು) ರಸ್ತೆ ತಡೆ

ದುಷ್ಪರಿಣಾಮ ಬೀರುತ್ತಿವೆ ಎಂದು ತಿಳಿಸಿದರು.

ರಾಜ್ಯ ಸರ್ಕಾರವು ಕನಿಷ್ಠ ವೇತನ ಪರಿಷ್ಕರಣೆಯಲ್ಲಿ ವಿಫಲವಾಗಿದೆ ಎಂದು ಸಂಘಟನೆಗಳು ಆರೋಪಿಸಿವೆ. ಕಾನೂನು ಪ್ರಕಾರ ಐದು ವರ್ಷಕ್ಕೊಮ್ಮೆ ವೇತನ ಪರಿಷ್ಕರಣೆ ಮಾಡಬೇಕಾದರೂ ಕೊನೆಯದಾಗಿ 2017ರಲ್ಲಿ ಮಾತ್ರ ಪರಿಷ್ಕರಣೆ ನಡೆದಿದ್ದು, ಬಳಿಕ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ. 2025ರಲ್ಲಿ ಸುಮಾರು ₹25,000ಕ್ಕೆ ಹೆಚ್ಚಿಸುವ ಪ್ರಾಥಮಿಕ ಅಧಿಸೂಚನೆ ಹೊರಬಂದಿದ್ದರೂ ಅದನ್ನು ಇನ್ನೂ ಅಂತಿಮಗೊಳಿಸಿಲ್ಲ ಎಂದು ಅವರು ಹೇಳಿದರು.

ಸುಪ್ರೀಂ ಕೋರ್ಟ್‌ನ ಪ್ರಕಾರ ಕನಿಷ್ಠ ವೇತನ ನೀಡದಿರುವುದು ಬಲವಂತದ ಕೆಲಸಕ್ಕೆ ಸಮಾನವಾಗುತ್ತದೆ. ಆದಾಗ್ಯೂ ಆಸ್ಪತ್ರೆಗಳು, ಬಸ್ ನಿಲ್ದಾಣಗಳು, ಗ್ರಂಥಾಲಯಗಳು ಸೇರಿದಂತೆ ಅನೇಕ ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳಲ್ಲಿ ಗುತ್ತಿಗೆ ಕಾರ್ಮಿಕರಿಗೆ ಕಾನೂನುಬದ್ಧ ವೇತನ ನೀಡಲಾಗುತ್ತಿಲ್ಲ ಎಂದು ಅವರು ಆರೋಪಿಸಿದರು.

ಬೇಡಿಕೆಗಳು:ಕಾರ್ಮಿಕ ವಿರೋಧಿ ನಾಲ್ಕು ಸಂಹಿತೆಗಳನ್ನು ತಕ್ಷಣ ರದ್ದುಪಡಿಸಬೇಕು.ಕನಿಷ್ಠ ವೇತನವನ್ನು ತಿಂಗಳಿಗೆ ₹42,000ಕ್ಕೆ ನಿಗದಿ ಮಾಡಬೇಕು. ಕಾರ್ಮಿಕ ಕಾನೂನುಗಳ ಕಟ್ಟುನಿಟ್ಟಾದ ಅನುಷ್ಠಾನ ಖಚಿತಪಡಿಸಬೇಕು. ಗುತ್ತಿಗೆ ಪದ್ಧತಿಯನ್ನು ರದ್ದುಗೊಳಿಸಿ ಗುತ್ತಿಗೆ ಕಾರ್ಮಿಕರನ್ನು ಖಾಯಂಗೊಳಿಸಬೇಕು. ತುಂಗಭದ್ರಾ ನೀರಾವರಿ ಕಾರ್ಮಿಕರಿಗೆ ಉದ್ಯೋಗ ಭದ್ರತೆ ನೀಡಬೇಕು. ಸರ್ಕಾರದ ನಿರ್ದೇಶನ, ವ್ಯವಸ್ಥಾಪಕ ನಿರ್ದೇಶಕರ ಅನುಮೋದನೆ ಹಾಗೂ ಉಪ ಕಾರ್ಮಿಕ ಆಯುಕ್ತರ ಸೂಚನೆಗಳನ್ನು ಪಾಲಿಸಬೇಕು ತುಂಗಭದ್ರಾ ನೀರಾವರಿ ಕಾರ್ಮಿಕರ ಜನವರಿ, ಫೆಬ್ರವರಿ ಮತ್ತು ಮಾರ್ಚ್ ತಿಂಗಳ ಬಾಕಿ ವೇತನವನ್ನು ತಕ್ಷಣ ಪಾವತಿಸಬೇಕು.

ಈ ಸಂದರ್ಭದಲ್ಲಿ ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘದ ಕೇಂದ್ರ ಸಮಿತಿಯ ವಿಭಾಗದ ಅಧ್ಯಕ್ಷ ರಾಜಾಸಾಬ್, ಉಪ ವಿಭಾಗದ ಅಧ್ಯಕ್ಷರಾದ ವೆಂಕಟೇಶ್ ಕೋರಿ, ಈಶಪ್ಪ ಗೌಡ, ಚಂದು ಸಾಬ್, ಗೋಪಾಲ ರಾವ್, ನಾಗರಾಜ್ ಮಡಿವಾಳ, ಶಿವಪುತ್ರಪ್ಪ, ಹನುಮಂತ ನಾಯಕ, ನಾಗಲಿಕರ್ ಸೇರಿದಂತೆ ನೂರಾರು ಕಾರ್ಮಿಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಅನಧಿಕೃತ ಆರ್ ಓ ಘಟಕಗಳಿಗೆ ಪುರಸಭೆಯಿಂದ ನೋಟಿಸ್ : ದಾಖಲೆ ಸಲ್ಲಿಸದಿದ್ದರೆ ಮುಚ್ಚುವ ಎಚ್ಚರಿಕೆ

ದಾಖಲೆಗಳನ್ನು ಕಡ್ಡಾಯವಾಗಿ ಸಲ್ಲಿಸುವಂತೆ ಸೂಚಿಸಲಾಗಿದೆ.

ನಿಗದಿತ ಅವಧಿಯೊಳಗೆ ದಾಖಲೆಗಳನ್ನು ಸಲ್ಲಿಸದಿದ್ದಲ್ಲಿ, ಸಾರ್ವಜನಿಕರ ಆರೋಗ್ಯ ಹಿತದೃಷ್ಟಿಯಿಂದ ಪುರಸಭೆ ಕಾಯ್ದೆ 1964ರ ಪ್ರಕಾರ ಯಾವುದೇ ಮುನ್ಸೂಚನೆ ನೀಡದೇ ಘಟಕಗಳನ್ನು ಮುಚ್ಚುವ ಹಾಗೂ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಪುರಸಭೆ ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

ಪಟ್ಟಣದಲ್ಲಿ ಅನಧಿಕೃತವಾಗಿ ಕಾರ್ಯನಿರ್ವಹಿಸುತ್ತಿರುವ ನೀರು ಶುದ್ಧೀಕರಣ ಘಟಕಗಳಿಂದ ಸಾರ್ವಜನಿಕ ಆರೋಗ್ಯಕ್ಕೆ ಅಪಾಯ ಉಂಟಾಗುವ ಸಾಧ್ಯತೆ ಇರುವುದರಿಂದ, ಪುರಸಭೆ ಕ್ರಮಕ್ಕೆ ಸಾರ್ವಜನಿಕರಿಂದ ಸಹ ಮೆಚ್ಚುಗೆ ವ್ಯಕ್ತವಾಗುತ್ತಿದೆ.

ಗುತ್ತಿಗೆ ಪದ್ಧತಿ ರದ್ದು, ಕನಿಷ್ಠ ವೇತನ ಹೆಚ್ಚಳಕ್ಕೆ ಒತ್ತಾಯಿಸಿ (ಎಐಸಿಸಿಟಿಯು) ರಸ್ತೆ ತಡೆ



ಸಿರವಾರ,ಏ.9-

ರಾಜ್ಯ ಹಾಗೂ ದೇಶದಾದ್ಯಂತ ಕಾರ್ಮಿಕರ ಬದುಕು ದಿನೇದಿನೇ ಸಂಕಷ್ಟಕ್ಕೀಡಾಗುತ್ತಿರುವ ಹಿನ್ನೆಲೆಯಲ್ಲಿ ಕನಿಷ್ಠ ವೇತನವನ್ನು ತಕ್ಷಣ ಪರಿಷ್ಕರಿಸಿ ತಿಂಗಳಿಗೆ ಕನಿಷ್ಠ ₹42,000 ನಿಗದಿ ಮಾಡಬೇಕು, ಗುತ್ತಿಗೆ ಪದ್ಧತಿಯನ್ನು ರದ್ದುಗೊಳಿಸಿ ಗುತ್ತಿಗೆ ಕಾರ್ಮಿಕರನ್ನು ಖಾಯಂಗೊಳಿಸಬೇಕು ಎಂದು ಆಗ್ರಹಿಸಿ ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘ (ಎಐಸಿಸಿಟಿಯು) ಸಿರಿವಾರ ವಿಭಾಗದ ಸಮಿತಿ ವತಿಯಿಂದ ನಗರದ ಬಸ್ ನಿಲ್ದಾಣದ ಮುಂಭಾಗ ರಸ್ತೆ ತಡೆ ನಡೆಸಿ ಪ್ರತಿಭಟನೆ ಮಾಡಲಾಯಿತು.

ಈ ವೇಳೆ ತುಂಗಭದ್ರಾ ನೀರಾವರಿ ಕಾರ್ಮಿಕ ಸಂಘದ ಕೇಂದ್ರ ಸಮಿತಿಯ ಅಧ್ಯಕ್ಷ ಕೆ. ನಾಗಲಿಂಗಸ್ವಾಮಿ ಅವರು ಮಾತನಾಡಿದರು, ಕೇಂದ್ರ ಸರ್ಕಾರವು 2025ರ ನವೆಂಬರ್ 21ರಿಂದ ಜಾರಿಗೆ ತಂದ ನಾಲ್ಕು ಕಾರ್ಮಿಕ ಸಂಹಿತೆಗಳು ದಶಕಗಳ ಹೋರಾಟದ ಮೂಲಕ ಕಾರ್ಮಿಕರು ಪಡೆದುಕೊಂಡ ಹಕ್ಕುಗಳನ್ನು ದುರ್ಬಲಗೊಳಿಸುತ್ತಿವೆ ಎಂದು ಆರೋಪಿಸಿದರು.

''ವ್ಯವಹಾರ ಸುಲಭತೆ'' ಎಂಬ ಹೆಸರಿನಲ್ಲಿ ಉದ್ಯೋಗದಾತರಿಗೆ ಹೆಚ್ಚಿನ ಅಧಿಕಾರ ನೀಡಿ ಕಾರ್ಮಿಕರ ಮೇಲೆ ಶೋಷಣೆಗೆ ಅವಕಾಶ ಕಲ್ಪಿಸಲಾಗುತ್ತಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

2026ರ ಫೆಬ್ರವರಿ 12ರಂದು ನಡೆದ ದೇಶವ್ಯಾಪಿ ಸಾಮಾನ್ಯ ಮುಷ್ಕರಕ್ಕೆ ಕಾರ್ಮಿಕರಿಂದ ಭಾರೀ ಬೆಂಬಲ ವ್ಯಕ್ತವಾಗಿದ್ದು, ಕಾರ್ಮಿಕ ವಿರೋಧಿ ನೀತಿಗಳಿಗೆ ತೀವ್ರ ವಿರೋಧ ವ್ಯಕ್ತವಾಗಿದೆ. ಕಾರ್ಮಿಕ ಸಂಹಿತೆಗಳು ವೇತನ, ಉದ್ಯೋಗ ಭದ್ರತೆ ಹಾಗೂ ಸಂಘಟನಾ ಹಕ್ಕುಗಳ ಮೇಲೆ ದುಷ್ಪರಿಣಾಮ ಬೀರುತ್ತಿವೆ ಎಂದು ತಿಳಿಸಿದರು.

ರಾಜ್ಯ ಸರ್ಕಾರವು ಕನಿಷ್ಠ ವೇತನ ಪರಿಷ್ಕರಣೆಯಲ್ಲಿ ವಿಫಲವಾಗಿದೆ ಎಂದು ಸಂಘಟನೆಗಳು ಆರೋಪಿಸಿವೆ. ಕಾನೂನು ಪ್ರಕಾರ ಐದು ವರ್ಷಕ್ಕೊಮ್ಮೆ ವೇತನ ಪರಿಷ್ಕರಣೆ ಮಾಡಬೇಕಾದರೂ ಕೊನೆಯದಾಗಿ 2017ರಲ್ಲಿ ಮಾತ್ರ ಪರಿಷ್ಕರಣೆ ನಡೆದಿದ್ದು, ಬಳಿಕ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ. 2025ರಲ್ಲಿ ಸುಮಾರು ₹25,000ಕ್ಕೆ ಹೆಚ್ಚಿಸುವ ಪ್ರಾಥಮಿಕ ಅಧಿಸೂಚನೆ ಹೊರಬಂದಿದ್ದರೂ ಅದನ್ನು ಇನ್ನೂ ಅಂತಿಮಗೊಳಿಸಿಲ್ಲ ಎಂದು ಅವರು ಹೇಳಿದರು.

ಸುಪ್ರೀಂ ಕೋರ್ಟ್‌ನ ಪ್ರಕಾರ ಕನಿಷ್ಠ ವೇತನ ನೀಡದಿರುವುದು ಬಲವಂತದ ಕೆಲಸಕ್ಕೆ ಸಮಾನವಾಗುತ್ತದೆ. ಆದಾಗ್ಯೂ ಆಸ್ಪತ್ರೆಗಳು, ಬಸ್ ನಿಲ್ದಾಣಗಳು, ಗ್ರಂಥಾಲಯಗಳು ಸೇರಿದಂತೆ ಅನೇಕ ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳಲ್ಲಿ ಗುತ್ತಿಗೆ ಕಾರ್ಮಿಕರಿಗೆ ಕಾನೂನುಬದ್ಧ ವೇತನ ನೀಡಲಾಗುತ್ತಿಲ್ಲ ಎಂದು ಅವರು ಆರೋಪಿಸಿದರು.

ಬೇಡಿಕೆಗಳು:ಕಾರ್ಮಿಕ ವಿರೋಧಿ ನಾಲ್ಕು ಸಂಹಿತೆಗಳನ್ನು ತಕ್ಷಣ ರದ್ದುಪಡಿಸಬೇಕು.ಕನಿಷ್ಠ ವೇತನವನ್ನು ತಿಂಗಳಿಗೆ ₹42,000ಕ್ಕೆ ನಿಗದಿ ಮಾಡಬೇಕು. ಕಾರ್ಮಿಕ ಕಾನೂನುಗಳ ಕಟ್ಟುನಿಟ್ಟಾದ ಅನುಷ್ಠಾನ ಖಚಿತಪಡಿಸಬೇಕು. ಗುತ್ತಿಗೆ ಪದ್ಧತಿಯನ್ನು ರದ್ದುಗೊಳಿಸಿ ಗುತ್ತಿಗೆ ಕಾರ್ಮಿಕರನ್ನು ಖಾಯಂಗೊಳಿಸಬೇಕು. ತುಂಗಭದ್ರಾ ನೀರಾವರಿ ಕಾರ್ಮಿಕರಿಗೆ ಉದ್ಯೋಗ ಭದ್ರತೆ ನೀಡಬೇಕು. ಸರ್ಕಾರದ ನಿರ್ದೇಶನ, ವ್ಯವಸ್ಥಾಪಕ ನಿರ್ದೇಶಕರ ಅನುಮೋದನೆ ಹಾಗೂ ಉಪ ಕಾರ್ಮಿಕ ಆಯುಕ್ತರ ಸೂಚನೆಗಳನ್ನು ಪಾಲಿಸಬೇಕು ತುಂಗಭದ್ರಾ ನೀರಾವರಿ ಕಾರ್ಮಿಕರ ಜನವರಿ, ಫೆಬ್ರವರಿ ಮತ್ತು ಮಾರ್ಚ್ ತಿಂಗಳ ಬಾಕಿ ವೇತನವನ್ನು ತಕ್ಷಣ ಪಾವತಿಸಬೇಕು.

ಈ ಸಂದರ್ಭದಲ್ಲಿ ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘದ ಕೇಂದ್ರ ಸಮಿತಿಯ ವಿಭಾಗದ ಅಧ್ಯಕ್ಷ ರಾಜಾಸಾಬ್, ಉಪ ವಿಭಾಗದ ಅಧ್ಯಕ್ಷರಾದ ವೆಂಕಟೇಶ್ ಕೋರಿ, ಈಶಪ್ಪ ಗೌಡ, ಚಂದು ಸಾಬ್, ಗೋಪಾಲ ರಾವ್, ನಾಗರಾಜ್ ಮಡಿವಾಳ, ಶಿವಪುತ್ರಪ್ಪ, ಹನುಮಂತ ನಾಯಕ, ನಾಗಲಿಕರ್ ಸೇರಿದಂತೆ ನೂರಾರು ಕಾರ್ಮಿಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಸಚಿವ ಶರಣಪ್ರಕಾಶ ಪಾಟೀಲ ಉಚ್ಚಾಟನೆಗೆ ಆಗ್ರಹಿಸಿ ಮಾದಿಗ ದಂಡೋರ ಸಂಘಟನೆಯಿಂದ ಮನವಿ



ಕಲ್ಯಾಣ ಸಂಜೆ ಸುದ್ದಿ

ರಾಯಚೂರು,ಏ.9-

ಡಾ. ಬಾಬು ಜಗಜೀವನರಾವ್ ಅವರ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ ಅವರು ಆಗಮಿಸದೇ ದಲಿತರಿಗೆ ಅವಮಾನ ಮಾಡಿದ್ದಾರೆ ಎಂದು ಆರೋಪಿಸಿ ಮಾದಿಗ ದಂಡೋರ (ಪಾವಗಡ ಶ್ರೀರಾವ್ ಬಣ) ಸಂಘಟನೆ ಜಿಲ್ಲಾಧಿಕಾರಿಗಳ ಮುಖಾಂತರ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದೆ.

ಸಂಘಟನೆಯ ಜಿಲ್ಲಾ ಅಧ್ಯಕ್ಷ ಬಿ. ನರಸಿಂಹಲು ಮೆರ್ಚಟಳ್ ಅವರ ನೇತೃತ್ವದಲ್ಲಿ ಸಲ್ಲಿಸಿದ ಮನವಿಯಲ್ಲಿ, ಏಪ್ರಿಲ್ 5ರಂದು ನಡೆದ ಡಾ. ಬಾಬು ಜಗಜೀವನರಾಮ್ ಅವರ ಜಯಂತಿ ಕಾರ್ಯಕ್ರಮಕ್ಕೆ ಸಚಿವರು ಮುಖ್ಯ ಅತಿಥಿಗಳಾಗಿ ಆಗಮಿಸಬೇಕಾಗಿದ್ದರೂ ಉದ್ದೇಶಪೂರ್ವಕವಾಗಿ ಹಾಜರಾಗಿಲ್ಲ ಎಂದು ಆರೋಪಿಸಲಾಗಿದೆ. ಇದರಿಂದ ಮಾದಿಗ ಸಮುದಾಯದ ಜನರ ಮನಸ್ಸಿಗೆ ನೋವಾಗಿದೆ ಎಂದು ತಿಳಿಸಲಾಗಿದೆ.

ಜಿಲ್ಲೆಗೆ ಎರಡು ಬಾರಿ ಉಸ್ತುವಾರಿ ಸಚಿವರಾಗಿದ್ದರೂ ಜಿಲ್ಲೆಯಲ್ಲಿ ಅಭಿವೃದ್ಧಿ ಕೆಲಸಗಳು ಕಂಡುಬಂದಿಲ್ಲ ಎಂದು ಆರೋಪಿಸಿರುವ ಸಂಘಟನೆ, ರಾಷ್ಟ್ರ ನಾಯಕರ ಕಾರ್ಯಕ್ರಮಕ್ಕೂ ಹಾಜರಾಗದಂತಹ ಸಚಿವರನ್ನು ತಕ್ಷಣವೇ ಸಚಿವ ಸ್ಥಾನದಿಂದ ಉಚ್ಚಾಟನೆ ಮಾಡಬೇಕು ಎಂದು ಸರ್ಕಾರವನ್ನು ಆಗ್ರಹಿಸಿದೆ.

ಇದಲ್ಲದೆ ರಾಜ್ಯದಲ್ಲಿ ಸುಮಾರು 38 ಲಕ್ಷ ಜನಸಂಖ್ಯೆ ಹೊಂದಿರುವ ಮಾದಿಗ ಸಮುದಾಯವನ್ನು ಕಡೆಗಣಿಸಲಾಗಿದೆ ಎಂದು ಆರೋಪಿಸಿ, ಒಳಮೀಸಲಾತಿ ಜಾರಿಗೆ ತರಬೇಕು ಎಂದು ಒತ್ತಾಯಿಸಲಾಗಿದೆ. ಏಪ್ರಿಲ್ 9 ಮತ್ತು 10ರಂದು ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಒಳಮೀಸಲಾತಿ ಜಾರಿಗೆ ತಂದು ಸಾವಿರ ಹುದ್ದೆಗಳನ್ನು ಒಳಮೀಸಲಾತಿ ಆಧಾರದಲ್ಲಿ ಭರ್ತಿ ಮಾಡಬೇಕು ಎಂದು ಮನವಿಯಲ್ಲಿ ಹೇಳಲಾಗಿದೆ.

ಈ ಬೇಡಿಕೆಗಳನ್ನು ಈಡೇರಿಸದಿದ್ದಲ್ಲಿ ಮುಂದಿನ ಚುನಾವಣೆಗಳಲ್ಲಿ ಕಾಂಗ್ರೆಸ್ ವಿರುದ್ಧ ಮತ ಚಲಾಯಿಸಲಾಗುವುದು ಹಾಗೂ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಮತ್ತು ಸಚಿವರಿಗೆ ವಿರುದ್ಧ ಪ್ರತಿಭಟನೆಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಸಂಘಟನೆ ಎಚ್ಚರಿಕೆ ನೀಡಿದೆ.ಈ ಸಂದ್ರಬಾದಲ್ಲಿ ಹೇಮರಾಜ್ ಆಸ್ಕಿಹಾಳ್,ಊರಕುಂದಿ, ತಯಪ್ಪ ಗಧಾರ್ ಆಂಜಿನೇಯ, ಲಕ್ಷ್ಮಣ್ ಇತರರು ಉಪಸ್ಥಿತರಿದ್ದರು...

ಶ್ರೀ ಬಸವ ಜಯಂತಿ ಅದ್ದೂರಿ ಹಾಗೂ ಅರ್ಥಪೂರ್ಣ ಜಯಂತಿಗೆ ಎಲ್ಲರೂ ಸಹಕರಿಸಿ: ಎಡಿಸಿ ಸಿದ್ರಾಮೇಶ್ವರ

ಕೊಪ್ಪಳ ,ಏ.09-

ಏಪ್ರಿಲ್ 20 ರಂದು ಆಚರಿಸಲಾಗುವ ಶ್ರೀ ಬಸವ ಜಯಂತಿ ಕಾರ್ಯಕ್ರಮವನ್ನು ಎಲ್ಲರೂ ಸೇರಿ ಅದ್ದೂರಿಯಾಗಿ ಅರ್ಥಪೂರ್ಣವಾಗಿ ಆಚರಿಸಲು, ಒಳ್ಳೆಯ ರೀತಿಯಲ್ಲಿ ಆಯೋಜನೆ ಮಾಡಲು ಎಲ್ಲರೂ ಸಹಕರಿಸಿ ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಹೇಳಿದರು.

ಅವರು ಬುಧವಾರದಂದು ಶ್ರೀ ಬಸವ ಜಯಂತಿ ಅಂಗವಾಗಿ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಅಂದು ಬೆಳಗ್ಗೆ 8 ಗಂಟೆಗೆ ಅಂಬಿಗರ ಚೌಡಯ್ಯ ಉದ್ಯಾನವನದಲ್ಲಿರುವ ಬಸವೇಶ್ವರ ಪುತ್ಥಳಿಗೆ ಹೂ-ಮಾಲೆಗಳನ್ನು ಹಾಕಿದ ನಂತರ 9 ಗಂಟೆಗೆ ಗಂಜ್ ಸರ್ಕಲ್‌ನಲ್ಲಿರುವ ಬಸವೇಶ್ವರ ಮೂರ್ತಿಗೆ ಮಾಲಾರ್ಪಣೆ ಮಾಡಲಾಗುತ್ತದೆ. ನಂತರ ಸಂಜೆ 4 ಗಂಟೆಗೆ ಗಡಿಯಾರ ಕಂಬದ ಬಳಿ ಇರುವ ಮಹೇಶ್ವರ ದೇವಸ್ಥಾನದಿಂದ ಗವಿಮಠದವರೆಗೆ ಬಸವೇಶ್ವರ ಭಾವಚಿತ್ರದ ಮೆರವಣಿಗೆ ನಡೆಯಲಿದೆ ಎಂದರು.

ವೇದಿಕೆ ಕಾರ್ಯಕ್ರಮ ಅಂದು ಸಂಜೆ 6 ಗಂಟೆಗೆ ಗವಿಮಠದ ತೇರು ಮೈದಾನದಲ್ಲಿ ನಡೆಯಲಿದೆ. ರಾಯಭಾಗ ತಾಲ್ಲೂಕಿನ ಹಾರೋಗೇರಿಯ ಶರಣ ಚಿಂತಕರು ಹಾಗೂ ಹಿರಿಯ ಸಾಹಿತಿಗಳಾದ ಡಾ.ವಿ.ಎಸ್.ಮಾಳಿ ಹಾಗೂ ಬೆಳಗಾವಿಯ ಶಿಕ್ಷಕಿ ಹಾಗೂ ಬಸವ ಚಿಂತಕರಾದ ಡಾ.ದಾನಮ್ಮ ಝಳಕಿ ಇವರು ಬಸವೇಶ್ವರ ಅವರ ಕುರಿತು ವಿಶೇಷ ಉಪನ್ಯಾಸ ನೀಡುವರು. ರಥದ ಸಿಂಗಾರ ಒಳ್ಳೆಯ ರೀತಿಯಲ್ಲಿ ಮಾಡಬೇಕು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ ಸೇರಿದಂತೆ ಇತರೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ತಮಗೆ ವಹಿಸಿದ ಕೆಲಸ ಕಾರ್ಯಗಳನ್ನು ಜವಾಬ್ದಾರಿಯಿಂದ ಹಾಗೂ ಅಚ್ಚುಕಟ್ಟಾಗಿ ನಿಭಾಯಿಸಬೇಕು. ಸಾಂಸ್ಕೃತಿಕ ನಾಯಕ ಬಸವಣ್ಣನವರ ಜಯಂತಿಯನ್ನು ಎಲ್ಲರೂ ಸೇರಿ ಅದ್ದೂರಿಯಾಗಿ ಆಚರಿಸೋಣ ಎಂದು ಹೇಳಿದರು.

ಈ ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ, ಆಹಾರ ಇಲಾಖೆಯ ಉಪನಿರ್ದೇಶಕರಾದ ವಿಶ್ವನಾಥಗೌಡ ಎಂ.ಎನ್., ಡಿಸಿಎಫ್ ಕಚೇರಿಯ ಮಲ್ಲಿಕಾರ್ಜುನ ಗೌಡ್ರ, ಎಎಸ್‌ಐ ವೀರಭದ್ರಪ್ಪ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವ್ಹಿ.ಪಿ., ಬಸವ ಸಮಾಜದ ಜಿಲ್ಲಾಧ್ಯಕ್ಷರಾದ ಬಸವರಾಜ ಬಳ್ಳೊಳ್ಳಿ, ಗವಿಸಿದ್ದಪ್ಪ, ಈಶ್ವರಪ್ಪ ತೋಟಪ್ಪ ದಿನ್ನಿ, ಸೇರಿದಂತೆ ಸಮಾಜದ ಇತರೆ ಮುಖಂಡರು, ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿ ಉಪಸ್ಥಿತರಿದ್ದರು.



ಮಹಿಳಾ ಸಬಲೀಕರಣದಿಂದ ಗ್ರಾಮಾಭಿವೃದ್ಧಿ ಸಾಧ್ಯ: ಪಿಡಿಒ ಗೀತಾ ಪಾಟೀಲ್

ಭಾಲ್ಕಿ,ಏ. 09

ಮಹಿಳೆಯರ ಆರ್ಥಿಕ ಸಬಲೀಕರಣವು ಗ್ರಾಮಾಭಿವೃದ್ಧಿಗೆ ಮಹತ್ವದ ಪಾತ್ರ ವಹಿಸುತ್ತದೆ. ಈ ನಿಟ್ಟಿನಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಪಂಚಾಯಿತಿಯು ವಿವಿಧ ಯೋಜನೆಗಳ ಮೂಲಕ ಪ್ರೋತ್ಸಾಹ ನೀಡಲಿದೆ ಎಂದು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಗೀತಾ ಪಾಟೀಲ್ ಹೇಳಿದರು.

ತಾಲೂಕಿನ ಅಂಬೆಸಾಂಗವಿ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಮಂಗಳವಾರ ನಡೆದ ಮಹಿಳಾ ಗ್ರಾಮಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಮಹಿಳೆಯರ ಸಬಲೀಕರಣಕ್ಕಾಗಿ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೆ ತಂದಿದ್ದು, ತರಬೇತಿ, ಆರ್ಥಿಕ ನೆರವು ಸೇರಿದಂತೆ ವಿವಿಧ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಮಹಿಳೆಯರು ಈ ಅವಕಾಶಗಳನ್ನು ಸದ್ಬಳಕೆ ಮಾಡಿಕೊಂಡು ತಮ್ಮ ಜೀವನಮಟ್ಟವನ್ನು ಸುಧಾರಿಸಿಕೊಳ್ಳಬೇಕು ಎಂದು ತಿಳಿಸಿದರು.

ಮಹಿಳಾ ಗ್ರಾಮಸಭೆಗಳ ಮೂಲಕ ಮಹಿಳೆಯರ ಸಮಸ್ಯೆಗಳ ಕುರಿತು ಚರ್ಚಿಸಿ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗುತ್ತದೆ. ಜೊತೆಗೆ ಅವರಿಗೆ ದೊರೆಯುವ ಸೌಲಭ್ಯಗಳ ಬಗ್ಗೆ ಜಾಗೃತಿ ಮೂಡಿಸುವುದಕ್ಕೂ ಇದು ಸಹಕಾರಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ವಿವಿಧ ಸಂಘ-ಸಂಸ್ಥೆಗಳ ಪ್ರಮುಖ ಮಹಿಳೆಯರು ಭಾಗವಹಿಸಿದ್ದರು.

ವಿದ್ಯಾರ್ಥಿ ಶಿವಕುಮಾರನಿಗೆ ಧನಸಹಾಯ: ಸಂಗೊಳ್ಳಿ ರಾಯಣ್ಣ ಟ್ರಸ್ಟ್ ನೆರವು



ಕಲ್ಯಾಣ ಸಂಜೆ ಸುದ್ದಿ

ರಾಯಚೂರು,ಏ.9-

ಜಿಲ್ಲೆಯ ಕಲ್ಯಾಣ ಕರ್ನಾಟಕ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಟ್ರಸ್ಟ್ ವತಿಯಿಂದ ಹಾಲುಮತ ಸಮಾಜದ ಬಡ ವಿದ್ಯಾರ್ಥಿಗೆ ಧನಸಹಾಯ ನೀಡುವ ಮೂಲಕ ಮಾನವೀಯತೆ ಮೆರೆದಿದ್ದಾರೆ.

ರಾಯಚೂರು ತಾಲೂಕಿನ ಗಾಣದಾಳ ಗ್ರಾಮದ ಶಿವಕುಮಾರ (ತಂದೆ ಭೀಮಯ್ಯ) ಅವರು ಬಿ.ಇಡ್ ಕಾಲೇಜಿನ ಅಂತಿಮ ವರ್ಷದ ವಿದ್ಯಾರ್ಥಿಯಾಗಿದ್ದು, ತಂದೆ-ತಾಯಿ ಮೃತಪಟ್ಟ ಕಾರಣ ಆರ್ಥಿಕ ಸಂಕಷ್ಟದಲ್ಲಿ ವಿದ್ಯಾಭ್ಯಾಸ ವ'ುುಂದ'ುವ'ರಿ'ಸ'ಲು ಕಷ್ಟಪಡುತ್ತಿರುವುದು ಟ್ರಸ್ಟ್ ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ನೆರವು ನೀಡಲಾಗಿದೆ. ರಘುಪತಿ ಪೂಜಾರಿ ದಿನ್ನಿ ಅವರ ಮಾಹಿತಿಯ ಮೇರೆಗೆ ಟ್ರಸ್ಟ್‌ನ ಪದಾಧಿಕಾರಿಗಳು ಹಾಗೂ ಸದಸ್ಯರಿಂದ ಧನಸಹಾಯ ಸಂಗ್ರಹಿಸಿ ಟ್ರಸ್ಟ್ ಖಾತೆಯ ಮೂಲಕ ವಿದ್ಯಾರ್ಥಿಗೆ ಸಹಾಯ ಒದಗಿಸಲಾಗಿದೆ.

ಗುರುವಾರ ಬೆಳಿಗ್ಗೆ 9 ಗಂಟೆಗೆ ನಡೆದ ಕಾರ್ಯಕ್ರಮದಲ್ಲಿ ವಿದ್ಯಾರ್ಥಿ ಶಿವಕುಮಾರನನ್ನು ಕಂಬಳಿ ಹೊದಿಸಿ ಸನ್ಮಾನಿಸಿ ಅಭಿನಂದಿಸಲಾಯಿತು. ಈ ವೇಳೆ 32,000 ರೂ.ಗಳ ಚೆಕ್ ಹಾಗೂ 8,000 ರೂ. ನಗದು ಸೇರಿದಂತೆ ಒಟ್ಟು 40,000 ರೂ. ಧನಸಹಾಯವನ್ನು ನೀಡಲಾಯಿತು.

ಈ ಸಂದರ್ಭದಲ್ಲಿ ಟ್ರಸ್ಟ್‌ನ ಗೌರವಾಧ್ಯಕ್ಷ ಬಿ. ಬಸವರಾಜ್ ಮಾತನಾಡಿ, ಆರ್ಥಿಕ ತೊಂದರೆಯಿಂದ ಪ್ರತಿಭಾವಂತ ವಿದ್ಯಾರ್ಥಿಯ ವಿದ್ಯಾಭ್ಯಾಸಕ್ಕೆ ಅಡ್ಡಿಯಾಗಬಾರದು ಎಂಬ ಉದ್ದೇಶದಿಂದ ಟ್ರಸ್ಟ್‌ನ ಪದಾಧಿಕಾರಿಗಳು ಮತ್ತು ಸದಸ್ಯರು ಸಹಾಯಕ್ಕೆ ಮುಂದಾಗಿದ್ದಾರೆ. ಶಿವಕುಮಾರನು ಮುಂದಿನ ವಿದ್ಯಾಭ್ಯಾಸವನ್ನು ಯಶಸ್ವಿಯಾಗಿ ಮುಂದುವರೆಸಿ ಉತ್ತಮ ಸಾಧನೆ ಮಾಡಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಟ್ರಸ್ಟ್‌ನ ಗೌರವ ಸಲಹೆಗಾರ ರಾಜಶೇಖರ್ ದಿನ್ನಿ, ಜಿಲ್ಲಾಧ್ಯಕ್ಷ ಅಯ್ಯಣ್ಣ ವಡವಟ್ಟಿ, ಪ್ರಧಾನ ಕಾರ್ಯದರ್ಶಿ ಡಿ. ಶ್ರೀನಿವಾಸ್, ಖಜಾಂಚಿ ರಮೇಶ ಉಪ್ರಾಳ, ಹಿರಿಯ ಉಪಾಧ್ಯಕ್ಷ ನರಸಿಂಹಲು ತೋರ್ಸಿ ಹಾಗೂ ಪದಾಧಿಕಾರಿಗಳಾದ ಬಜಾರಪ್ಪ, ವೆಂಕಟೇಶ್ ಇಡಪನೂರು, ವೆಂಕಟೇಶ್ ಉಪ್ರಾಳ, ಶಿವು (ಎಲ್‌ಐಸಿ) ಗಿಲ್ಲೇಸೂಗೂರು, ರಘುಪತಿ ಪೂಜಾರಿ ದಿನ್ನಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಸಿಂಧನೂರು ಟಿಬಿಪಿ ಕಚೇರಿಯಲ್ಲಿ ಖಾಲಿ ಹುದ್ದೆ ಭರ್ತಿಗೆ ಒತ್ತಾಯ

ರಾಯಚೂರು,ಏ.9-

ತುಂಗಭದ್ರಾ ಯೋಜನೆ (ಟಿಬಿಪಿ) ಉಪವಿಭಾಗ ಕಾರ್ಯಾಲಯ ಸಿಂಧನೂರಿನಲ್ಲಿ ಹಲವು ಪ್ರಮುಖ ಹುದ್ದೆಗಳು ಖಾಲಿ ಇದ್ದು, ಇದರಿಂದ ಪಾರದರ್ಶಕ ಆಡಳಿತಕ್ಕೆ ತೀವ್ರ ತೊಡಕಾಗಿದೆ ಎಂದು ಜೈ ಕರುನಾಡು ರಕ್ಷಣಾ ಸೇನೆ ರಾಯಚೂರು ಜಿಲ್ಲಾ ಘಟಕ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ.

ಈ ಕುರಿತು ಜಿಲ್ಲಾಧ್ಯಕ್ಷ ಬಸವಂತ ಹಿರೇಕಡಬೂರು ಅವರು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿ, ಸಿಂಧನೂರು ಟಿಬಿಪಿ ಉಪವಿಭಾಗ ಕಾರ್ಯಾಲಯದಲ್ಲಿ ಸಹಕಾರ, ಕೃಷಿ ಹಾಗೂ ತಾಂತ್ರಿಕ ವಿಭಾಗ ಸೇರಿ ಒಟ್ಟು 3 ಪಿವನ್ ಹುದ್ದೆಗಳು, 2 ಎಸ್‌ಡಿಎ ಹುದ್ದೆಗಳು, 3 ಜೆಇ ಹುದ್ದೆಗಳು ಹಾಗೂ 2 ಎಇ ಹುದ್ದೆಗಳು ಖಾಲಿ ಬಿದ್ದಿವೆ. ಪ್ರಮುಖ ಹುದ್ದೆಗಳೇ ಖಾಲಿ ಇರುವುದರಿಂದ ರೈತರ ಕಡತಗಳು ತಿಂಗಳುಗಟ್ಟಲೆ ವಿಲೇವಾರಿಯಾಗದೆ ಬಾಕಿ ಉಳಿಯುತ್ತಿವೆ. ರೈತರು ಕಚೇರಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆರೋಪಿಸಿದ್ದಾರೆ.

ಸಿಬ್ಬಂದಿ ಕೊರತೆಯ ನೆಪ ಹೇಳಿ ಜನಸಾಮಾನ್ಯರ ಕೆಲಸಗಳನ್ನು ವಿಳಂಬ ಮಾಡುವುದು ಸರಿಯಲ್ಲ. ಟಿಬಿಪಿ ಸಹಾಯಕ ಅಭಿಯಂತರರು ಸಿಂಧನೂರು ಉಪವಿಭಾಗ ಕಾರ್ಯಾಲಯದಲ್ಲಿ ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ಈ ಕೂಡಲೇ ಭರ್ತಿ ಮಾಡಬೇಕು. ಇಲ್ಲದಿದ್ದರೆ ಜೈ ಕರುನಾಡು ರಕ್ಷಣಾ ಸೇನೆ ವತಿಯಿಂದ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಸರ್ಕಾರ ಮತ್ತು ಸಂಬಂಧಪಟ್ಟ ಮೇಲಧಿಕಾರಿಗಳು ಕೂಡಲೇ ಗಮನಹರಿಸಿ, ರೈತರ ಹಿತದೃಷ್ಟಿಯಿಂದ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿ ಸುಗಮ ಆಡಳಿತಕ್ಕೆ ಅನುವು ಮಾಡಿಕೊಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ನಿಮ್ಮೂರು ಸುದ್ದಿ

ಸಂಪಾದಕೀಯ

ಯುದ್ಧ ನಿಲ್ಲಬಹುದು, ಯುದ್ಧೋನ್ಮಾದ ನಿಲ್ಲುವುದೇ?



ಯುದ್ಧ ನಿಲ್ಲಬಹುದು. ಆದರೆ ಯುದ್ಧೋನ್ಮಾದದಲ್ಲಿ ತೇಲಾಡುತ್ತಿರುವವರನ್ನು ಕೆಳಗಿಳಿಸುವುದು ಕಷ್ಟವಿದೆ. ಯುದ್ಧೋನ್ಮಾದದ ಭಾಷೆಯನ್ನು ರಾಜಕೀಯ ಪಕ್ಷಗಳು ಮತ್ತದರ ನಾಯಕರು ಅಧಿಕಾರಕ್ಕಾಗಿ, ಸ್ವಾರ್ಥಕ್ಕಾಗಿ ಬಳಸುತ್ತಾರೆ. ಇದು ಯುದ್ಧ ನಿಂತ ನಂತರವೂ ಸಮಾಜವನ್ನು ವಿಭಜಿಸಲು ಕಾರಣವಾಗುತ್ತದೆ.

ಸದ್ಯ ಯುದ್ಧ ನಿಂತಿದೆ. ಕಾಲು ಕೆದರಿ ಕಾದಾಟಕ್ಕಿಳಿದಿದ್ದ ದೇಶಗಳು ಕದನ ವಿರಾಮ ಘೋಷಿಸಿವೆ. ವಿರಾಮ ಎನ್ನುವುದು ಯುದ್ಧನಿರತ ದೇಶಗಳಿಗಷ್ಟೇ ಅಲ್ಲ, ಇಡೀ ಮಾನವಕುಲಕ್ಕೇ ಮುಖ್ಯವಾಗಿದೆ. ಏಕೆಂದರೆ ಯುದ್ಧ ತರುವ ಸಾವು-ನೋವು, ಕಷ್ಟ-ನಷ್ಟ ಅಷ್ಟಿಷ್ಟಲ್ಲ. ಸಂಪನ್ಮೂಲ ಉರಿದು ಪರಿಸರ ಬರಡಾಗುವುದಕ್ಕೆ ಲೆಕ್ಕವಿಲ್ಲ. ಅಂತಹ ಬರಡು ಪ್ರದೇಶವಾಗಿರುವ ಪ್ಯಾಲೆಸ್ತೀನ್ ಗಾಜಾ ಪಟ್ಟಿಯನ್ನು ಜೀವ ಉಕ್ಕಿಸುವ ಜಾಗವಾಗಿಸುವುದು ಸಾಧ್ಯವಿಲ್ಲ.

ಹಾಗೆ ನೋಡಿದರೆ, ಯುದ್ಧ ಆಗಿದ್ದು ಇಸ್ರೇಲ್, ಅಮೆರಿಕ ಮತ್ತು ಇರಾನ್ ದೇಶಗಳ ನಡುವೆ. ಆ ಮೂರು ದೇಶಗಳು ನಮ್ಮಿಂದ ಸಾವಿರಾರು ಮೈಲಿ ದೂರದಲ್ಲಿವೆ. ಆದರೆ ಆ ದೇಶಗಳ ನಡುವೆ ನಡೆದ ಯುದ್ಧ, ನಮ್ಮ ಮೇಲೆ ನೇರವಾಗಿ ಪರಿಣಾಮ ಬೀರುತ್ತಿದೆ. ನಮ್ಮ ಅಡುಗೆ ಮನೆಯಿಂದ ಹಿಡಿದು ದೇಶದ ಆರ್ಥಿಕತೆವರೆಗೆ; ನಮ್ಮ ಜೇಬಿನಿಂದ ಹಿಡಿದು ರಿಸರ್ವ್ ಬ್ಯಾಂಕ್‌ವರೆಗೆ ಆದ ಅನಾಹುತ ಲೆಕ್ಕಕ್ಕೆ ಸಿಗದಾಗಿದೆ.

ಕೊಲ್ಲಿ ದೇಶಗಳಲ್ಲಿ ಯುದ್ಧ ಆರಂಭವಾಗುತ್ತಿದ್ದಂತೆ, ಇಲ್ಲಿ ಗ್ಯಾಸ್ ಸಿಲಿಂಡರ್ ಸರಬರಾಜು ವ್ಯತ್ಯಯವಾಯಿತು. ಪೆಟ್ರೋಲ್-ಡೀಸೆಲ್ ಕೊರತೆ ಉಂಟಾಯಿತು. ಸರಕು-ಸಾಗಾಣೆ ವೆಚ್ಚ ಹೆಚ್ಚಾಗಿ ದಿನಬಳಕೆ ವಸ್ತುಗಳ ಬೆಲೆ ಏರಿತು. ಹೋಟೆಲ್-ರೆಸ್ಟೋರೆಂಟ್-ಪಿಜಿಗಳು ಬಂದ್ ಆದವು. ಅದನ್ನು ನಂಬಿದ್ದ ಅಸಂಘಟಿತ ಕಾರ್ಮಿಕರು ಬೀದಿಗೆ ಬಿದ್ದರು. ಊಟ-ತಿಂಡಿ ಬೆಲೆ ಏರಿಕೆಯಾಗಿ ವಲಸಿಗರು, ಪ್ರವಾಸಿಗರು ಪರದಾಡಿದರು. ಷೇರು ಪೇಟೆ ದಿಢೀರ್ ಕುಸಿಯಿತು. ಅದರ ಮೇಲೆ ಹಣ ಹೂಡಿದವರು ಆತ್ಮಹತ್ಯೆಗೆ ಶರಣಾದರು. ಅದಂದಿನ ಆದಾಯ ನಂಬಿ ಬದುಕುವ ವಲಸೆ ಕಾರ್ಮಿಕರು, ಮತ್ತೆ ಊರ ಕಡೆ ಮುಖ ಮಾಡಿದರು. ಗ್ಯಾಸ್ ಬಳಸುತ್ತಿದ್ದ ಆಟೋ-ಕಾರು ಚಾಲಕರು, ದಿನವಿಡೀ ಕ್ಯೂ ನಿಂತರೂ ಗ್ಯಾಸ್ ಸಿಗದಾಯಿತು. ಗ್ಯಾಸ್ ಸ್ಟೇಷನ್‌ಗಳಿಗೆ ನೋ ಸ್ಟಾಕ್ ಬೋರ್ಡ್ ಮತ್ತು ಬೀಗ ಬಿತ್ತು. ಕಾಳಸಂತೆಯಲ್ಲಿ ಸಿಲಿಂಡರ್ ಖರೀದಿಸಿದ ಹೋಟೆಲ್ ಮಾಲೀಕರು ಮತ್ತು ಆಟೋ ಚಾಲಕರು ಹೆಚ್ಚುವರಿ ಹೊರೆಯನ್ನು ಜನರ ತಲೆ ಮೇಲೆ ಹಾಕಿದರು. ಅನಗತ್ಯ ಜಗಳ ಶುರುವಾಯಿತು. ಮನುಷ್ಯ-ಮನುಷ್ಯರ ನಡುವೆ ವೈಷಮ್ಯ. ವಾತಾವರಣವೇ ಕಲುಷಿತವಾಯಿತು.

ಇನ್ನು ಮನೆಯೊಳಗಿನ ಬದಲಾವಣೆಗಳು ಒಂದೆರಡಲ್ಲ. ಗ್ಯಾಸ್ ಬದಲಿಗೆ ಎಲೆಕ್ಟ್ರಿಕ್ ಸ್ಟವ್, ಸೀಮೆಎಣ್ಣೆ, ಸೌದೆ ಬಳಕೆಗೆ ಬಂದವು. ಸ್ಕೂಟರ್-ಕಾರ್ ಬದಲಿಗೆ ಸೈಕಲ್-ಬಸ್ ಬಳಸುವುದು ಹೆಚ್ಚಾಯಿತು. ಆದಾಯ ಕಡಿಮೆಯಾಯಿತು. ನಿತ್ಯ ಬಳಕೆ ವಸ್ತುಗಳ ಬೆಲೆ ಏರಿಕೆಯಾಯಿತು. ಹೊಟ್ಟೆ-ಬಟ್ಟೆ ಕಟ್ಟಿ ಬದುಕುವ ಸ್ಥಿತಿಗೆ ಒಗ್ಗಿಕೊಳ್ಳಬೇಕಾಯಿತು.

ಯುದ್ಧ- ಬಡವರು ಮತ್ತು ಮಧ್ಯಮವರ್ಗದವರ ಮೇಲೆ ನೇರವಾಗಿ ಪರಿಣಾಮ ಬೀರಿತು. ಬದುಕು ಅಸ್ತವ್ಯಸ್ತಗೊಂಡು ಆತಂಕ ಸೃಷ್ಟಿಸಿತು. ದೇಶದ ಜನ ತೊಂದರೆಗೆ ಒಳಗಾಗದಂತೆ ನೋಡಿಕೊಳ್ಳಬೇಕಾದ, ಅವರ ಬದುಕನ್ನು ಹಸನುಗೊಳಿಸಬೇಕಾದ ಆಳುವ ಸರ್ಕಾರ, ಯುದ್ಧದಿಂದಾಗಿ ಇಡೀ ಪ್ರಪಂಚವೇ ತೊಂದರೆಗೆ ಸಿಲುಕಿದೆ, ನಮ್ಮ ದೇಶವೊಂದೇ ಅಲ್ಲ ಎನ್ನುವ ಸಮಜಾಯಿಷಿ ಮಾತುಗಳಿಂದ ಬಡವರಿಗೆ ಹಲ್ಲುಕಚ್ಚಿ ಬದುಕುವ ಪಾಠ ಮಾಡಿತು. ಕಷ್ಟ-ನಷ್ಟವನ್ನು ಸಾರ್ವತ್ರಿಕರಿಸಿತು. ಇನ್ನು ರಾಜಕೀಯ ನಾಯಕರು ತಮ್ಮ ಅಧಿಕಾರವನ್ನು ಭದ್ರಪಡಿಸಿಕೊಳ್ಳಲು ಚುನಾವಣೆಗಳತ್ತ ಗಮನ ಹರಿಸಿದರು. ಗೆಲ್ಲಲು ಪಾಕಿಸ್ತಾನವನ್ನು ಎಳೆದುತಂದು, ನಾವು ಮತ್ತು ಅವರು ಎಂದು ವಿಭಜಿಸಿದರು. ಯುದ್ಧೋನ್ಮಾದದಲ್ಲಿ ತೇಲಾಡಿದರು.

ವಿಪರ್ಯಾಸವೆಂದರೆ, ಯುದ್ಧ ಒಂದು ದಿನ ನಿಲ್ಲಬಹುದು. ಗಡಿಗಳಲ್ಲಿ ಗುಂಡಿನ ಸದ್ದು ಅಡಗಬಹುದು. ಆದರೆ ಯುದ್ಧೋನ್ಮಾದದಲ್ಲಿ ತೇಲಾಡುತ್ತಿರುವವರನ್ನು ಕೆಳಗಿಳಿಸುವುದು ಕಷ್ಟವಿದೆ. ಯುದ್ಧ- ಎರಡು ದೇಶಗಳ ನಡುವೆ, ಕೇವಲ ಸೈನಿಕರಿಗಷ್ಟೇ ಸೀಮಿತವಾಗುವುದಿಲ್ಲ. ಹಿಂಸೆ, ರಕ್ತ, ಸಾವು, ಸರ್ವನಾಶವನ್ನು ಸಾರುತ್ತದೆ. ಜನಸಾಮಾನ್ಯರ ಮನಸ್ಸನ್ನು ಮಲಿನಗೊಳಿಸುತ್ತದೆ. ದೇಶಭಕ್ತಿ, ಭದ್ರತೆ, ಪ್ರತೀಕಾರ ಹೊತ್ತಿ ಉರಿಯುತ್ತದೆ. ಮನುಷ್ಯರ ನಡುವೆ ಕಂದಕ ಸೃಷ್ಟಿಸುತ್ತದೆ. ದ್ವೇಷ, ಅಸಹಿಷ್ಣುತೆ ಬಿತ್ತುತ್ತದೆ. ಶತ್ರುತ್ವ ಹುಟ್ಟುಹಾಕುತ್ತದೆ. ಅದು ಯುದ್ಧ ನಿಂತ ನಂತರವೂ ಮುಂದುವರೆಯುತ್ತದೆ.

ಇಂದಿನ ಡಿಜಿಟಲ್ ಯುಗದಲ್ಲಿ ಯುದ್ಧೋನ್ಮಾದ ಇನ್ನಷ್ಟು ವೇಗವಾಗಿ ಹರಡುತ್ತದೆ. ಸಾಮಾಜಿಕ ಮಾಧ್ಯಮಗಳು ಅಸಲಿ ಮಾಹಿತಿಗಿಂತ ಸುಳ್ಳು ಸುದ್ದಿಗಳು, ಅತಿರಂಜಿತ ವರದಿಗಳು, ಕೆರಳಿಸುವ ನಿರೂಪಣೆಗಳು ಮತ್ತು ಉದ್ದೀಪನಕಾರಿ ಚಿತ್ರಣಗಳನ್ನು ಚಿತ್ತಕ್ಕಿಳಿಸುತ್ತವೆ. ಯುದ್ಧದ ವೇಳೆ ಬಳಕೆಯಾದ ದ್ವೇಷ ಭಾಷೆ, ಹಿಂಸಾತ್ಮಕ ಚಿತ್ರಣಗಳು ಮತ್ತು ಪ್ರಚಾರಗಳು ಜನರಲ್ಲಿ ಭಯ ಮತ್ತು ಕೋಪವನ್ನು ನೆಲೆಗೊಳಿಸುತ್ತವೆ. ಈ ಮನೋಭಾವವು ದಿನನಿತ್ಯದ ಜೀವನದಲ್ಲೂ ಪ್ರತಿಫಲಿಸುತ್ತದೆ. ಯುದ್ಧ ನಿಂತ ನಂತರವೂ ಮುಂದುವರಿಯುತ್ತದೆ.

ಯುದ್ಧೋನ್ಮಾದದ ಭಾಷೆಯನ್ನು ರಾಜಕೀಯ ಪಕ್ಷಗಳು ಮತ್ತದರ ನಾಯಕರು ಅಧಿಕಾರಕ್ಕಾಗಿ, ಸ್ವಾರ್ಥಕ್ಕಾಗಿ ಬಳಸುತ್ತಾರೆ. ಜನರ ಭಾವನೆಗಳನ್ನು ಕೆರಳಿಸಲು, ಬೆಂಬಲ ಗಳಿಸಲು ಪ್ರಯತ್ನಿಸುತ್ತಾರೆ. ಇದನ್ನು ನಾವು 2014ರಿಂದ, ಸಂಘ ಪರಿವಾರ ಮತ್ತು ಬಿಜೆಪಿ ನಾಯಕರಲ್ಲಿ ನೋಡುತ್ತಿದ್ದೇವೆ. ಇದು ಯುದ್ಧ ನಿಂತ ನಂತರವೂ ಸಮಾಜವನ್ನು ವಿಭಜಿಸುತ್ತಿರುವುದನ್ನು ಕಾಣುತ್ತಿದ್ದೇವೆ.

ಈ ಬಗೆಯ ಯುದ್ಧೋನ್ಮಾದವನ್ನು ನಿಲ್ಲಿಸಲು ಕೇವಲ ಯುದ್ಧ ವಿರಾಮ ಸಾಕಾಗುವುದಿಲ್ಲ. ಯುದ್ಧ ನಿಂತ ತಕ್ಷಣ ಶಾಂತಿ ಸ್ಥಾಪನೆಯಾಗುವುದಿಲ್ಲ. ಅದು ಕೇವಲ ಒಪ್ಪಂದಗಳಿಂದ ಸಾಧ್ಯವಿಲ್ಲ. ಶಾಂತಿ, ಸಹೋದರತೆ, ಸೌಹಾರ್ದ ಸಂಸ್ಕೃತಿಯನ್ನು ಬೆಳೆಸುವ ಪ್ರಾಮಾಣಿಕ ಪ್ರಯತ್ನವಾಗಬೇಕು. ಮಾಧ್ಯಮಗಳು ಜವಾಬ್ದಾರಿಯುತವಾಗಿ ವರ್ತಿಸಬೇಕು. ಶಿಕ್ಷಣ ವ್ಯವಸ್ಥೆ ತರ್ಕಬದ್ಧ ಚಿಂತನೆ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸಬೇಕು. ನಾಗರಿಕ ಸಮಾಜವು ಸಂವಾದ ಮತ್ತು ಸಹಬಾಳ್ವೆಯನ್ನು ಉತ್ತೇಜಿಸಬೇಕು. ಯುದ್ಧ ಮತ್ತು ಉನ್ಮಾದ ಸರ್ಕಾರಗಳ ನಿರ್ಧಾರವಾಗಿರಬಹುದು, ಆದರೆ ಶಾಂತಿ ಜನರ ಆಯ್ಕೆಯಾಗಿರಬೇಕು.

ಕದನ ವಿರಾಮ ಘೋಷಿಸಿದ್ದರೂ, ಹಾರ್ಮುಜ್ 'ಸುಂಕ' ಮುಂದುವರಿಯಲಿವೆ!



1429ರಲ್ಲಿ, ಪೊಮೆರೇನಿಯಾದ ರಾಜ ಎರಿಕ್ ಇಂದಿನ ಡೆನ್ಮಾರ್ಕ್ ಮತ್ತು ಸ್ವೀಡನ್ ನಡುವಿನ ಕಿರಿದಾದ ಓರಿಸುಂಡ್ ಜಲಸಂಧಿಯ ಮೂಲಕ ಹಾದುಹೋಗುವ ಹಡಗುಗಳಿಂದ ಸುಂಕ ವಸೂಲಿ ಮಾಡಲು ಆರಂಭಿಸಿದ್ದರು. ಬಾಲ್ಟಿಕ್ ಸಮುದ್ರದ ಕಡೆಗೆ ಹೋಗುವ ಪ್ರತಿಯೊಂದು ನೌಕೆಯು ಡೇನಿಷ್ ಬಂದರಿಗೆ ಹೋಗಲಿ ಅಥವಾ ಬಿಡಲಿ, ಹೆಲ್ಸಿಂಗರ್ ಕೋಟೆಯ ಬಳಿ ನಿಂತು ಹಣ ಪಾವತಿಸಬೇಕಾಗಿತ್ತು. ನಿರಾಕರಿಸಿದವರಿಗೆ ಎರಡೂ ತೀರಗಳಲ್ಲಿದ್ದ ಫಿರಂಗಿಗಳು ಉತ್ತರ ನೀಡುತ್ತಿದ್ದವು. 16 ಮತ್ತು 17ನೇ ಶತಮಾನದ ವೇಳೆಗೆ, ಈ ಸೌಂಡ್ ಡ್ಯೂಸ್ (ಓರಿಸುಂಡ್ ಬಳಕೆಯ ಸುಂಕ) ಡೇನಿಷ್ ಸಾಮ್ರಾಜ್ಯದ ಒಟ್ಟು ಆದಾಯದ ಮೂರನೇ ಎರಡರಷ್ಟು ಭಾಗವಾಗಿತ್ತು.

ಆನಂತರ, 1567ರಲ್ಲಿ ಇದನ್ನು ಸರಕು ಮೌಲ್ಯದ 1-2%ರಷ್ಟು ತೆರಿಗೆಯಾಗಿ ಮರುರೂಪಿಸಲಾಯಿತು. ಇದರಿಂದ, ಡೇನಿಷ್ ಸಾಮ್ರಾಜ್ಯದ ಆದಾಯ ಮೂರು ಪಟ್ಟು ಹೆಚ್ಚಾಯಿತು. ಸಣ್ಣಪುಟ್ಟ ಅಡೆತಡೆಗಳೊಂದಿಗೆ ಇದು 428 ವರ್ಷಗಳ ಕಾಲ ಮುಂದುವರೆಯಿತು. ಬ್ರಿಟನ್, ಫ್ರಾನ್ಸ್, ರಷ್ಯಾ ಸೇರಿದಂತೆ 13 ರಾಷ್ಟ್ರಗಳು ಒಗ್ಗೂಡಿ 1857ರ ಕೋಪನ್ ಹ್ಯಾಗನ್ ಒಪ್ಪಂದದ ಅಡಿಯಲ್ಲಿ ಸುಮಾರು 12 ವರ್ಷಗಳ ಸುಂಕದ ಆದಾಯವನ್ನು ಸರಿದೂಗಿಸುವ 3.35 ಕೋಟಿ ರಿಕ್ಸ್-ಡಾಲರ್ ಪಾವತಿಸಿ, ಸುಂಕ ವ್ಯವಸ್ಥೆಯನ್ನು ರದ್ದುಗೊಳಿಸಿದವು.

ಈಗ, 2026ರ ವಸಂತಕಾಲದಲ್ಲಿ, ಹಾರ್ಮುಜ್ ಜಲಸಂಧಿಯು ಈ ಇತಿಹಾಸವನ್ನು ಮರುಕಳಿಸುವಂತೆ ಮಾಡಿದೆ. ಫೆಬ್ರವರಿ 28ರಂದು, ಇರಾನ್ ಮೇಲೆ ಅಮೆರಿಕ ಮತ್ತು ಇಸ್ರೇಲ್ ಜಂಟಿ ದಾಳಿ ನಡೆಸಿದ ಬಳಿಕ, ಇರಾನ್ ತೀವ್ರವಾಗಿ ಪ್ರತಿಕ್ರಿಯಿಸಿದೆ. ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ () ಹಾರ್ಮುಜ್ ಜಲಸಂಧಿಯನ್ನು ದಾಟುವ ಹಡಗುಗಳು ಸುಂಕ ತೆರಬೇಕೆಂದು ಸುಂಕ ಸಂಗ್ರಹ ಕಟ್ಟೆಯನ್ನು ನಿರ್ಮಿಸುತ್ತಿದೆ. ಈ ಹಾದಿಯಲ್ಲಿ ಸಾಗಬಯಸುವ ಹಡಗುಗಳು ಗೆ ಸಂಬಂಧಿಸಿದ ಮಧ್ಯವರ್ತಿಗಳನ್ನು ಸಂಪರ್ಕಿಸಿ ಹಡಗಿನ ಐಎಂಒ ಸಂಖ್ಯೆ, ಸಿಬ್ಬಂದಿ ಪಟ್ಟಿ, ಸರಕು ವಿವರ ಹಾಗೂ ಗಮ್ಯಸ್ಥಾನದ ದಾಖಲೆಗಳನ್ನು ಸಲ್ಲಿಸಬೇಕು. ಸ್ನೇಹಪರತೆಯ ಆಧಾರದ ಮೇಲೆ ರಾಷ್ಟ್ರಗಳಿಗೆ ಒಂದರಿಂದ ಐದರವರೆಗೆ ಶ್ರೇಣಿ ನೀಡಲಾಗುತ್ತದೆ; ಭಾರತ, ಪಾಕಿಸ್ತಾನ, ಚೀನಾ ಮತ್ತು ಇರಾಕ್ ಸದ್ಯಕ್ಕೆ ಇರಾನ್‌ನ ಸ್ನೇಹಪರತೆಯ ಪಟ್ಟಿಯಲ್ಲಿ ಉಳಿದಿವೆ.

ಸೌರ್ ಅಬ್ಬಾಸ್ ಬಳಿಯ ಲಾರಾಕ್ ದ್ವೀಪದ ಉತ್ತರದಲ್ಲಿರುವ ಕಿರಿದಾದ ಕಾಲುವೆಯನ್ನು ಹಡಗು ಸಮೀಪಿಸುತ್ತಿದ್ದಂತೆ, ಅದು ತನ್ನ ಕ್ಲಿಯರೆನ್ಸ್ ಕೋಡ್ ಅನ್ನು ವಿಹೆಚ್‌ಎಫ್ ರೇಡಿಯೋ ಮೂಲಕ ಪ್ರಸಾರ ಮಾಡಬೇಕು. ನಂತರ ಗಸ್ತು ದೋಣಿಯು ಆ ಹಡಗನ್ನು ಬೆಂಗಾವಲಾಗಿ ಕರೆದೊಯ್ಯುತ್ತದೆ. ತೈಲ ಟ್ಯಾಂಕರ್‌ಗೆ ಪ್ರತಿ ಬ್ಯಾರೆಲ್ ಸರಕಿನ ಮೇಲೆ ಸುಮಾರು ಒಂದು ಡಾಲರ್ ಶುಲ್ಕ ವಿಧಿಸಲಾಗುತ್ತಿದೆ. ಅಂದರೆ, 20 ಲಕ್ಷ ಬ್ಯಾರೆಲ್ ಹೊತ್ತೊಯ್ಯುವ ದೊಡ್ಡ ಟ್ಯಾಂಕರ್ ಪ್ರತಿ ಬಾರಿ ಹಾದು ಹೋಗಲು 20 ಲಕ್ಷ ಡಾಲರ್ (18.5 ಕೋಟಿ ರೂ.) ಪಾವತಿಸಬೇಕು.

ಯುದ್ಧಕ್ಕೆ ಮೊದಲು ದಿನಕ್ಕೆ ಸುಮಾರು 135 ವಾಣಿಜ್ಯ ಹಡಗುಗಳು ಇಲ್ಲಿ ಸಂಚರಿಸುತ್ತಿದ್ದವು. ಮಾರ್ಚ್ 16ರವರೆಗೆ ದಿನಕ್ಕೆ 24 ಹಡಗುಗಳಷ್ಟೇ ಹಾರ್ಮುಜ್ ಜಲಸಂಧಿಯನ್ನು ದಾಟುತ್ತಿದ್ದವು. ಮಾರ್ಚ್ 16ರಿಂದ ಏಪ್ರಿಲ್ 7ರವರೆಗೆ ಈ ಮಾರ್ಗದಲ್ಲಿ ಹಡಗು ಸಂಚಾರ ಶೂನ್ಯವಾಗಿತ್ತು ಎಂದು ಹೇಳಲಾಗಿದೆ.

ಇರಾನ್ ಮೇಲೆ ಅಮೆರಿಕ-ಇಸ್ರೇಲ್ ದಾಳಿ ಮಾಡಿದ ಫೆಬ್ರವರಿ 28ಕ್ಕೂ ಮೊದಲು ದಿನನಿತ್ಯ ಸುಮಾರು 10 ದೊಡ್ಡ ತೈಲ ಟ್ಯಾಂಕರ್‌ಗಳು () ಇಲ್ಲಿ ಸಂಚರಿಸುತ್ತಿದ್ದವು. ಈಗ, ಈ ಟ್ಯಾಂಕರ್‌ಗಳು ಸುಂಕ ಪಾವತಿ ಮಾಡಬೇಕಾಗಿದೆ. ಕೇವಲ ಈ 10 ತೈಲ ಟ್ಯಾಂಕರ್‌ಗಳಿಂದಲೇ ಇರಾನ್‌ಗೆ ದಿನಕ್ಕೆ 2 ಕೋಟಿ ಡಾಲರ್ ಆದಾಯ ಬರುತ್ತದೆ. ಎಲ್‌ಎನ್‌ಜಿ ಸಾಗಣೆಯನ್ನು ಸೇರಿಸಿದರೆ, ಇದು ತಿಂಗಳಿಗೆ 80 ಕೋಟಿ ಡಾಲರ್‌ಗಿಂತ ಹೆಚ್ಚಾಗುತ್ತದೆ. ಇದು ಈಜಿಪ್ಟ್‌ನ ಸುಯೆಜ್ ಕಾಲುವೆಯ ಆದಾಯಕ್ಕೆ ಸಮಾನವಾಗಿದೆ. ಒಂದು ಅಂದಾಜಿನ ಪ್ರಕಾರ, ಈ ಸುಂಕವು ಗೆ ವರ್ಷಕ್ಕೆ ಸುಮಾರು 5,000 ಕೋಟಿ ಡಾಲರ್ ಆದಾಯ ತಂದುಕೊಡಬಹುದು, ಅಂದರೆ ಇರಾನ್‌ನ ತೈಲ ಮಾರಾಟದ ಆದಾಯಕ್ಕಿಂತಲೂ ಇದು ದುಪ್ಪಟ್ಟು.

ಆದಾಗ್ಯೂ, ಅಂತಾರಾಷ್ಟ್ರೀಯ ಸಮುದ್ರ ಕಾನೂನು ಒಪ್ಪಂದದ () ಅಡಿಯಲ್ಲಿ ಅಂತಾರಾಷ್ಟ್ರೀಯ ಜಲಸಂಧಿಗಳ ಮೂಲಕ ಸಾಗುವ ಹಡಗುಗಳಿಗೆ ಯಾವುದೇ ಶುಲ್ಕ ವಿಧಿಸುವಂತಿಲ್ಲ. ಆದರೆ, ಈ ಒಪ್ಪಂದಕ್ಕೆ ತಾವು ಸಹಿ ಹಾಕಿಲ್ಲ ಎಂದು ಇರಾನ್ ತಾಂತ್ರಿಕ ವಾದ ಮುಂದಿಡುತ್ತಿದೆ. (ಸುಯೆಜ್ ಮತ್ತು ಪನಾಮ ಕಾಲುವೆಗಳು ಮಾನವ ನಿರ್ಮಿತವಾದವು. ಆದ್ದರಿಂದ ಅಲ್ಲಿ ಶುಲ್ಕ ವಿಧಿಸಲಾಗುತ್ತದೆ. ಆದರೆ, ಹಾರ್ಮುಜ್ ನೈಸರ್ಗಿಕ ಜಲಮಾರ್ಗವಾಗಿದ್ದು, ಇಲ್ಲಿ ಶುಲ್ಕ ವಸೂಲಿ ಮಾಡಲು ಅವಕಾಶವಿಲ್ಲ ಎನ್ನುತ್ತದೆ ಅಂತಾರಾಷ್ಟ್ರೀಯ ಕಾನೂನು.)

ಇರಾನ್ ತನ್ನ ತಾಂತ್ರಿಕ ವಾದದೊಂದಿಗೆ ಬಲವಾಗಿ ನಿಂತಿದೆ. ಆದರೆ, ನೌಕಾಪಡೆ ಮತ್ತು ರಾಜಕೀಯ ಇಚ್ಛಾಶಕ್ತಿಯ ಕೊರತೆಯಿಂದಾಗಿ ಅಂತರಾಷ್ಟ್ರೀಯ ಕಾನೂನನ್ನು ಜಾರಿಗೊಳಿಸಲು ಹಲವು ರಾಷ್ಟ್ರಗಳು ಪರದಾಡುತ್ತಿವೆ. ಅಮೆರಿಕ ತನ್ನ 130ಕ್ಕೂ ಹೆಚ್ಚು ನೌಕೆಗಳನ್ನು ಕಳೆದುಕೊಂಡಿರುವುದರಿಂದ ವಾಣಿಜ್ಯ ಹಡಗುಗಳಿಗೆ ಬೆಂಗಾವಲು ನೀಡಲು ಸಾಧ್ಯವಿಲ್ಲ ಎಂದು ಹೇಳಿಕೊಂಡಿರುವುದಾಗಿ ವರದಿಯಾಗಿದೆ.


ಇದೀಗ, ಇರಾನ್ ಮತ್ತು ಅಮೆರಿಕ ನಡುವೆ ಎರಡು ವಾರಗಳ ಕದನ ವಿರಾಮ ಘೋಷಣೆಯಾಗಿದೆ. ಇರಾನ್‌ನ ವಿದೇಶಾಂಗ ಸಚಿವ ಅಬ್ಬಾಸ್ ಅರಾಗ್ಚಿ, ''ಇರಾನ್ ಸಶಸ್ತ್ರ ಪಡೆಗಳ ಸಮನ್ವಯದೊಂದಿಗೆ ಹಾರ್ಮುಜ್ ಜಲಸಂಧಿಯಲ್ಲಿ ಸುರಕ್ಷಿತ ಸಂಚಾರ ಒದಗಿಸಲಾಗುತ್ತದೆ'' ಎಂದು ಹೇಳಿದ್ದಾರೆ. ಇಲ್ಲಿ ಸಮನ್ವಯ ಎಂಬ ಪದ ಬಳಕೆಯು, ಇರಾನ್‌ನ ನಿಯಂತ್ರಣದಲ್ಲಿಯೇ ಹಡಗುಗಳ ಸಂಚಾರಕ್ಕೆ ಅವಕಾಶ ಇರುತ್ತದೆ ಎಂಬುದನ್ನು ಸೂಚಿಸುತ್ತದೆ ಎಂಬುದು ತಜ್ಞರ ಅಭಿಪ್ರಾಯ.

ಅಚ್ಚರಿಯ ವಿಷಯವೆಂದರೆ, ಏಪ್ರಿಲ್ 6ರಂದು ಟ್ರಂಪ್, ''ನಾವೇಕೆ ಸುಂಕ ವಸೂಲಿ ಮಾಡಬಾರದು? ನಾವೇ ಗೆದ್ದವರು'' ಎಂದಿದ್ದರು. ಈಗ ಅವರ ಆಡಳಿತವು ಇರಾನ್ ಸಶಸ್ತ್ರ ಪಡೆಗಳೇ ಸಂಚಾರದ ಸಮನ್ವಯಕಾರರು ಎಂಬುದನ್ನು ಒಪ್ಪಿಕೊಂಡಿದೆ. ಅಂದರೆ, ಹಾರ್ಮುಜ್ ಜಲಸಂಧಿಯಲ್ಲಿ ಹಗಡುಗಳ ಸಂಚಾರಕ್ಕೆ ಬೆದರಿಕೆ ಇರುವುದಿಲ್ಲ. ಆದರೆ, ಸುಂಕ ವಸೂಲಿ ವಿಚಾರ ಇರಾನ್‌ನ ನಿರ್ಧಾರಕ್ಕೆ ಬಿಟ್ಟದ್ದು ಎಂದರ್ಥ.

ಆದ್ದರಿಂದ, ಇರಾನ್‌ನ ಈ ಯಶಸ್ಸು , ಜಾಗತಿಕ ವಾಣಿಜ್ಯ ವ್ಯಾಪಾರಗಳ ಮೇಲೆ ದೊಡ್ಡ ಪರಿಣಾಮ ಬೀರಲಿದೆ. ವಿಶ್ವದ ವ್ಯಾಪಾರದ ಸುಮಾರು 75%ರಷ್ಟು ವಹಿವಾಟು 13 ಜಲಸಂಧಿಗಳ ಮೂಲಕ ನಡೆಯುತ್ತಿದೆ. ಅದರಲ್ಲಿ, 20% ವಹಿವಾಟು ಹಾರ್ಮುಜ್ ಜಲಸಂಧಿಯ ಮೂಲಕವೇ ನಡೆಯುತ್ತದೆ. ಇರಾನ್‌ನ ಹೊಸ ಸುಪ್ರೀಂ ಲೀಡರ್ ಮೊಜ್ತಬಾ ಖಮೇನಿ ಅವರು ಹಾರ್ಮುಜ್‌ಅನ್ನು ನಿರ್ಬಂಧಿಸುವ ಮತ್ತು ಸುಂಕ ಹೇರುವ ಮೂಲಕ, ನೈಸರ್ಗಿಕ ಜಲಸಂಧಿಯನ್ನು ಶಾಶ್ವತ ಸುಂಕದ ಕಟ್ಟೆಯನ್ನಾಗಿ ಬದಲಾಯಿಸಲು ಸಾಧ್ಯವೆಂಬುದನ್ನು ತೂರಿಸಿಕೊಟ್ಟಿದ್ದಾರೆ.

1857ರಲ್ಲಿ ಇಡೀ ಜಗತ್ತು ಒಗ್ಗೂಡಿ ನೈಸರ್ಗಿಕ ಜಲಸಂಧಿ ಎಲ್ಲರಿಗೂ ಸೇರಿದ್ದು ಎಂದು ತೀರ್ಮಾನಿಸಿತ್ತು. ಆದರೆ, ಶುಕ್ರವಾರದಿಂದ ಇಸ್ಲಾಮಾಬಾದ್‌ನಲ್ಲಿ ಪ್ರಾರಂಭವಾಗಲಿರುವ ಮಾತುಕತೆಗಳು ನೈಸರ್ಗಿಕ ಜಲಸಂಧಿ ಎಲ್ಲರಿಗೂ ಮುಕ್ತವೆಂಬ ತತ್ವವು ಇನ್ನೂ ಅಸ್ತಿತ್ವದಲ್ಲಿದೆ ಎಂಬುದನ್ನು ತೋರುವುದೇ? ಅಥವಾ ಹಳೆಯ ಸುಂಕದ ಪದ್ಧತಿ ಮತ್ತೆ ಜಾರಿಗೆ ಬಂದಿದೆ ಎಂಬುದನ್ನು ಸೂಚಿಸುವುದೇ? ಇನ್ನೊಂದು ವಾರದಲ್ಲಿ ಸ್ಪಷ್ಟವಾಗಲಿದೆ.

ಬೀದರ್ ಜಲ್ಲಿ ಕಲ್ಲಿನ ರಸ್ತೆ ಮೇಲೆ ಜನರ ಸರ್ಕಸ್; ಮುಗ್ಗರಿಸಿ ಬಿದ್ದರೂ ಕದಲದ ಆಡಳಿತ!



ಹದಗೆಟ್ಟ ರಸ್ತೆಗಳು, ಜೀವ ಕೈಯಲ್ಲಿ ಹಿಡಿದು ಸಾಗಬೇಕಾದ ಅನಿವಾರ್ಯತೆ, ಮುಗ್ಗರಿಸಿ ಬಿದ್ದರೂ ಕೇಳುವವರಿಲ್ಲ, ಸವಾರರ ಪಾಲಿಗೆ ಮೃತ್ಯುಕೂಪವಾಗಿ ಮಾರ್ಪಟ್ಟಿರುವ ಹಳ್ಳ-ಕೊಳ್ಳಗಳು! ಇದು ಔರಾದ್ ತಾಲೂಕಿನ ಕೌಠಾ(ಕೆ)-ವಡಗಾಂವ(ದೇ) ಸಂಪರ್ಕ ರಸ್ತೆಯ ಇಂದಿನ ದುಸ್ಥಿತಿ. ಹಲವು ವರ್ಷಗಳಿಂದ ದುರಸ್ತಿ ಕಾಣದ ಈ ರಸ್ತೆಯಲ್ಲಿ ಸರ್ಕಸ್ ಮಾಡಿಕೊಂಡೇ ಸಂಚರಿಸುವ ಸಾರ್ವಜನಿಕರು ಈಗ ಆಡಳಿತ ವ್ಯವಸ್ಥೆ ಹಾಗೂ ಜನಪ್ರತಿನಿಧಿಗಳ ವಿರುದ್ಧ ಹಿಡಿಶಾಪ ಹಾಕುತ್ತಿದ್ದಾರೆ.

ಹೌದು, ಔರಾದ್ ತಾಲೂಕಿನ ಕೌಠಾ(ಕೆ)-ವಡಗಾಂವ(ದೇ) ಸಂಪರ್ಕ ಕಲ್ಪಿಸುವ ರಸ್ತೆ ಹಲವು ವರ್ಷಗಳಿಂದ ಸಂಪೂರ್ಣ ಹದಗೆಟ್ಟಿದ್ದು, ನಿತ್ಯ ಸಂಚಾರ ದುಸ್ತರವಾಗಿದೆ.

ವಡಗಾಂವ(ದೇ) ಗ್ರಾಮದಿಂದ ಆಲೂರ(ಕೆ), ಆಲೂರ(ಬಿ), ಬೇಲೂರ(ಎನ್), ಪಾಶಾಪುರ, ಗಡಿಕುಶನೂರು ಸೇರಿದಂತೆ ಇತರ ಹಳ್ಳಿಗಳ ಜನರು ಈ ರಸ್ತೆಯಲ್ಲಿ ನಿತ್ಯ ಸಂಚರಿಸುತ್ತಾರೆ. ಹಲವು ಗ್ರಾಮಗಳಿಗೆ ಬೈಕ್, ಬಸ್, ಆಟೊ ಸೇರಿದಂತೆ ಅನೇಕ ವಾಹನಗಳು ಸಂಚರಿಸುತ್ತವೆ. ಆದರೆ, ರಸ್ತೆಯುದ್ದಕ್ಕೂ ಹಾಸುಹೊಕ್ಕಾಗಿರುವ ಗುಂಡಿಗಳಿಗೆ ಲೆಕ್ಕವೇ ಇಲ್ಲ. ರಸ್ತೆಯ ಟಾರು ಕಿತ್ತು ಬಂದು, ಜಲ್ಲಿಕಲ್ಲುಗಳ ರಸ್ತೆ ನಿರ್ಮಾಣವಾಗಿದೆ. ಅದರಲ್ಲಿ ವಾಹನಗಳು ಕುಲುಕುತ್ತಾ ಸಾಗುತ್ತವೆ. ಹದಗೆಟ್ಟಿರುವ ರಸ್ತೆ ಮೂಲಕ ಹೋಗುವಾಗ ಗುಂಡಿಯಲ್ಲಿ ಆಯ ತಪ್ಪಿ ಬೈಕ್ ಸವಾರರು ಬಿದ್ದು ಕೈಕಾಲು ಮುರಿದುಕೊಂಡ ಪ್ರಸಂಗಗಳೂ ಇವೆ. ಆದರೂ ಸಹ ರಸ್ತೆ ದುರಸ್ತಿಗೆ ರಾಜಕಾರಣಿಗಳು ಅಧಿಕಾರಿಗಳು ಹಾಗೂ ಗಮನ ಹರಿಸುತ್ತಿಲ್ಲ ಎಂಬುದು ಸ್ಥಳೀಯರ ಆರೋಪವಾಗಿದೆ.

ಸುಮಾರು 11 ಕಿ.ಮೀ. ಇರುವ ಈ ರಸ್ತೆಯುದ್ದಕ್ಕೂ ಗುಂಡಿಗಳು ನಿರ್ಮಾಣವಾಗಿವೆ. ಗುಂಡಿಮಯ ರಸ್ತೆಯ ಮೇಲೆ ಸವಾರರು ಸರ್ಕಸ್ ಮಾಡುತ್ತ ಸಾಗಬೇಕಿದೆ. ಒಮ್ಮೊಮ್ಮೆ ರಸ್ತೆಯೊಳಗೇ ಗುಂಡಿಗಳೋ, ಗುಂಡಿಗಳೊಳಗೆ ರಸ್ತೆಗಳೋ ಎನ್ನುವ ಅನುಮಾನ ಬರುವಷ್ಟು ರಸ್ತೆ ಕಿತ್ತು ಗಬ್ಬೆದ್ದೋಗಿದೆ. ಡಾಂಬರ್ ಕಾಣದೆ ರಸ್ತೆ ಧೂಳುಮಯವಾಗಿದೆ. ಮಳೆಗಾಲದಲ್ಲಿ ತಗ್ಗುಗಳು ರಾಡಿಯಾದರೆ, ಬೇಸಿಗೆಯಲ್ಲಿ ಧೂಳುಮಯವಾಗುತ್ತದೆ. ಸ್ವಲ್ಪ ಆಯತಪ್ಪಿದರೂ ಅನಾಹುತ ತಪ್ಪಿದ್ದಲ್ಲ.

ವಡಗಾಂವ(ದೇ) ಸೇರಿದಂತೆ ಸುತ್ತಲಿನ ಹತ್ತಾರು ಗ್ರಾಮಗಳ ಶಾಲಾ-ಕಾಲೇಜಿನ ವಿದ್ಯಾರ್ಥಿಗಳು, ಸಾರ್ವಜನಿಕರು ನಿತ್ಯ ಬೀದರ್ ಜಿಲ್ಲಾ ಕೇಂದ್ರಕ್ಕೆ ತೆರಳುತ್ತಾರೆ. ತಗ್ಗುಗುಂಡಿಗಳ ಹದಗೆಟ್ಟ ರಸ್ತೆಯಲ್ಲಿಯೇ ಜನರು ಹರಸಾಹಟಪಟ್ಟು ಓಡಾಟ ಮಾಡುವುದು ಅನಿವಾರ್ಯವಾಗಿದೆ. ನಾಲ್ಕು ಬಾರಿ ಗೆದ್ದಿರುವ ಕ್ಷೇತ್ರದ ಶಾಸಕರೂ ಸಹ ರಸ್ತೆ ದುರಸ್ತಿ ವಿಚಾರದಲ್ಲಿ ಮೌನವಹಿಸಿದ್ದಾರೆ ಎನ್ನುತ್ತಿದ್ದಾರೆ ಸ್ಥಳೀಯರು.

ಈ ಕುರಿತು ಪಿಡಬ್ಲ್ಯುಡಿ ಎಇಇ ಪ್ರೇಮಸಾಗರ ಹಮೀಲಾಪುರೆ ಈದಿನದೊಂದಿಗೆ ಮಾತನಾಡಿ, ''ವಡಗಾಂವ(ದೇ)-ಕೌಠಾ(ಕೆ) ಮಾರ್ಗಮಧ್ಯದ ರಸ್ತೆ ಸಂಪೂರ್ಣ ಹದಗೆಟ್ಟಿರುವ ಬಗ್ಗೆ ಗಮನಕ್ಕಿದೆ. ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಿದ್ದೇನೆ. ಈ ರಸ್ತೆ ಅಭಿವೃದ್ಧಿ ಸಂಬಂಧ 10 ಕೋಟಿ ಅನುದಾನ ಮಂಜೂರಾತಿಗಾಗಿ ಮೂರು ತಿಂಗಳ ಹಿಂದೆ ಪ್ರಸ್ತಾವನೆ ಕಳಿಸಲಾಗಿದೆ. ಅನುದಾನ ಬಿಡುಗಡೆಯಾದ ಕೂಡಲೇ ರಸ್ತೆ ದುರಸ್ತಿ ಕಾಮಗಾರಿ ಕೈಗೊಳ್ಳಲಾಗುವುದು'' ಎಂದು ಹೇಳಿದರು.

''ಔರಾದ್ ತಾಲೂಕಿನ ಆಲೂರ(ಬಿ), ಆಲೂರು(ಕೆ), ಗಡಿಕುಶನೂರು, ಪಾಶಾಪೂರ ಸೇರಿದಂತೆ ಅನೇಕ ಗ್ರಾಮಗಳ ಜನರು ನಿತ್ಯ ಜಿಲ್ಲಾ, ತಾಲೂಕು ಕೇಂದ್ರಕ್ಕೆ ಶಾಲಾ-ಕಾಲೇಜು, ವ್ಯಾಪಾರ ವಹಿವಾಟಿಗೆ ತೆರಳುತ್ತಾರೆ. ಹದಗೆಟ್ಟ ರಸ್ತೆಯಿಂದಾಗಿ ಈ ಭಾಗದ ಜನರು ನಿತ್ಯ ತೊಂದರೆ ಅನುಭವಿಸುತ್ತಿದ್ದಾರೆ. ಕೂಡಲೇ ರಸ್ತೆ ದುರಸ್ತಿಗೊಳಿಸಬೇಕು. ಇಲ್ಲದಿದ್ದರೆ ಹೋರಾಟ ನಡೆಸಲಾಗುವುದು'' ಎಂದು ಸಾಮಾಜಿಕ ಕಾರ್ಯಕರ್ತ ಜಗದೀಶ್ವರ ಬಿರಾದರ್ ಎಚ್ಚರಿಸಿದ್ದಾರೆ.

ಕೌಠಾ(ಕೆ)-ವಡಗಾಂವ(ದೇ) ಗ್ರಾಮಕ್ಕೆ ಸಂಪರ್ಕಿಸುವ ರಸ್ತೆ ಹಾಳಾಗಿ ಹಲವು ವರ್ಷಗಳಾಗಿವೆ. ರಸ್ತೆಯುದ್ದಕ್ಕೂ ಆಳುದ್ದದ ತಗ್ಗು-ಗುಂಡಿಗಳಿವೆ. ಇಂತಹ ರಸ್ತೆಯಲ್ಲಿ ಸಂಚರಿಸುವ ಅನೇಕರು ಅಪಘಾತಕ್ಕೀಡಾಗಿ ಗಾಯಗೊಂಡಿದ್ದಾರೆ. ಆದರೂ ರಸ್ತೆ ಸುಧಾರಣೆಗೆ ಅಧಿಕಾರಿಗಳು, ಜನಪ್ರತಿನಿಧಿಗಳು ತಲೆಕೆಡಿಸಿಕೊಳ್ಳದೇ ನಿರ್ಲಕ್ಷ್ಯ ವಹಿಸುತ್ತಿದ್ದಾರೆ. ಈಗಲಾದರೂ ಎಚ್ಚೆತ್ತು ರಸ್ತೆ ರಿಪೇರಿ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು ಎಂದು ಬೇಲೂರ(ಎನ್) ಗ್ರಾಮಸ್ಥ ಸಂಜುಕುಮಾರ ಒತ್ತಾಯಿಸಿದ್ದಾರೆ.

ಪಿಡಬ್ಲ್ಯುಡಿ ಅಧಿಕಾರಿಗಳು 10 ಕೋಟಿ ರೂ.ಗಳ ಅನುದಾನದ ನಿರೀಕ್ಷೆಯಲ್ಲಿದ್ದೇವೆ ಎಂದು ಹೇಳುತ್ತಿದ್ದರೆ, ಇತ್ತ ಗ್ರಾಮಸ್ಥರು ಪ್ರತಿ ದಿನವೂ ಜೀವವನ್ನು ಪಣಕ್ಕಿಟ್ಟು ಸಂಚರಿಸುತ್ತಿದ್ದಾರೆ. ಶಾಲಾ ವಿದ್ಯಾರ್ಥಿಗಳ ಭವಿಷ್ಯ ಮತ್ತು ರೋಗಿಗಳ ತುರ್ತು ಚಿಕಿತ್ಸೆ ಗೆ ಈ ರಸ್ತೆಯೇ ದೊಡ್ಡ ಅಡ್ಡಿಯಾಗಿದೆ. ಮತ ಕೇಳಲು ಬರುವ ಜನಪ್ರತಿನಿಧಿಗಳು, ಜನರ ಈ ಮೂಲಭೂತ ಬೇಡಿಕೆಯನ್ನು ಈಡೇರಿಸುವಲ್ಲಿ ವಿಫಲರಾದರೆ ಮುಂದಿನ ದಿನಗಳಲ್ಲಿ ಚುನಾವಣಾ ಬಹಿಷ್ಕಾರ ಅಥವಾ ಉಗ್ರ ಹೋರಾಟದಂತಹ ನಿರ್ಧಾರಗಳಿಗೆ ಹಳ್ಳಿಗಳ ಜನ ಮುಂದಾಗುವುದರಲ್ಲಿ ಸಂಶಯವಿಲ್ಲ.

ಇನ್ನಾದರೂ ಸಂಬಂಧಪಟ್ಟ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ಹಾಗೂ ಜಿಲ್ಲಾಡಳಿತ ಎಚ್ಚೆತ್ತುಕೊಂಡು, ಅನುದಾನ ಬಿಡುಗಡೆಗೆ ವೇಗ ನೀಡಿ, ಈ ಮೃತ್ಯುಕೂಪಕ್ಕೆ ಮುಕ್ತಿ ಹಾಡಬೇಕಿದೆ. ಇಲ್ಲದಿದ್ದರೆ, ಮುಂದಾಗುವ ಅನಾಹುತಗಳಿಗೆ ಆಡಳಿತ ವ್ಯವಸ್ಥೆಯೇ ನೇರ ಹೊಣೆಯಾಗಲಿದೆ.

ಸಿಂಧನೂರು ಟಿಬಿಪಿ ಕಚೇರಿಯಲ್ಲಿ ಖಾಲಿ ಹುದ್ದೆ ಭರ್ತಿಗೆ ಒತ್ತಾಯ





ರಾಯಚೂರು,ಏ.9- ತುಂಗಭದ್ರಾ ಯೋಜನೆ (ಟಿಬಿಪಿ) ಉಪವಿಭಾಗ ಕಾರ್ಯಾಲಯ ಸಿಂಧನೂರಿನಲ್ಲಿ ಹಲವು ಪ್ರಮುಖ ಹುದ್ದೆಗಳು ಖಾಲಿ ಇದ್ದು, ಇದರಿಂದ ಪಾರದರ್ಶಕ ಆಡಳಿತಕ್ಕೆ ತೀವ್ರ ತೊಡಕಾಗಿದೆ ಎಂದು ಜೈ ಕರುನಾಡು ರಕ್ಷಣಾ ಸೇನೆ ರಾಯಚೂರು ಜಿಲ್ಲಾ ಘಟಕ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ.

ಈ ಕುರಿತು ಜಿಲ್ಲಾಧ್ಯಕ್ಷ ಬಸವಂತ ಹಿರೇಕಡಬೂರು ಅವರು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿ, ಸಿಂಧನೂರು ಟಿಬಿಪಿ ಉಪವಿಭಾಗ ಕಾರ್ಯಾಲಯದಲ್ಲಿ ಸಹಕಾರ, ಕೃಷಿ ಹಾಗೂ ತಾಂತ್ರಿಕ ವಿಭಾಗ ಸೇರಿ ಒಟ್ಟು 3 ಪಿವನ್ ಹುದ್ದೆಗಳು, 2 ಎಸ್‌ಡಿಎ ಹುದ್ದೆಗಳು, 3 ಜೆಇ ಹುದ್ದೆಗಳು ಹಾಗೂ 2 ಎಇ ಹುದ್ದೆಗಳು ಖಾಲಿ ಬಿದ್ದಿವೆ. ಪ್ರಮುಖ ಹುದ್ದೆಗಳೇ ಖಾಲಿ ಇರುವುದರಿಂದ ರೈತರ ಕಡತಗಳು ತಿಂಗಳುಗಟ್ಟಲೆ ವಿಲೇವಾರಿಯಾಗದೆ ಬಾಕಿ ಉಳಿಯುತ್ತಿವೆ. ರೈತರು ಕಚೇರಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆರೋಪಿಸಿದ್ದಾರೆ.

ಸಿಬ್ಬಂದಿ ಕೊರತೆಯ ನೆಪ ಹೇಳಿ ಜನಸಾಮಾನ್ಯರ ಕೆಲಸಗಳನ್ನು ವಿಳಂಬ ಮಾಡುವುದು ಸರಿಯಲ್ಲ. ಟಿಬಿಪಿ ಸಹಾಯಕ ಅಭಿಯಂತರರು ಸಿಂಧನೂರು ಉಪವಿಭಾಗ ಕಾರ್ಯಾಲಯದಲ್ಲಿ ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ಈ ಕೂಡಲೇ ಭರ್ತಿ ಮಾಡಬೇಕು. ಇಲ್ಲದಿದ್ದರೆ ಜೈ ಕರುನಾಡು ರಕ್ಷಣಾ ಸೇನೆ ವತಿಯಿಂದ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಸರ್ಕಾರ ಮತ್ತು ಸಂಬಂಧಪಟ್ಟ ಮೇಲಧಿಕಾರಿಗಳು ಕೂಡಲೇ ಗಮನಹರಿಸಿ, ರೈತರ ಹಿತದೃಷ್ಟಿಯಿಂದ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿ ಸುಗಮ ಆಡಳಿತಕ್ಕೆ ಅನುವು ಮಾಡಿಕೊಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR